

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

SIHI KAHI

KANNADA DAILY MORNING BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor: MARUTIBASAVANTAPPAHOSAMANI

Cell : +91 9741319119

RNI REG No. : KARKAN/2016/75068

Volume : 07 | Issue : 13 | Saturday 14-09-2024 | E-mail : maruti.b.hosamani76@gmail.com | Page: 4 | Price : Rs. 1/-


## "ಹೊನ್ನ ಚೆನ್ನುಡಿಗಳ ಬೆಳಕಿನಲ್ಲಿರಲಿ ಬದಕು ಮಾದರಿತನದ ನಲಿವು"

ಮುಖಸ್ತುತಿ ಕಿವಿಮಾತು ಚುಚ್ಚು ಮಾತು ಮನನೋಯದಿರಲಿ
ನುಡಿ ನಡೆ ಒಂದಾಗಿರಲಿ
ಧೈರ್ಯ ಮಾಡಿ ಪ್ರಶ್ನೆ ಕೇಳಿ

ತಂದೆ ತಾಯಿಯರ ಮುಂದೆ ಮೃದು ವಚನ ಚೆನ್ನ ಹೆತ್ತವರ ಹೊತ್ತವರ ಎದಿರು ಅಹಂ ಬೇಡ ಕಾಯಕ ಯಾವುದಾದರೇನು ಖುಷಿ ನಿಷ್ಠೆ ಉತ್ಸಾಹ ಇರಲಿ ಸಜ್ಜನರ ಸಂಗ ಲೇಸ ಹಿರಿಯರ ಅನುಭವಸ್ಥರ ಮಾತು ಮೋಸ ವಿರದು ಪಾಲಿಸಿ ಪ್ರತಿ ಕ್ಷಣ ಖುಷಿಯಾಗಿಸುವ ಸಾಮರ್ಥ್ಯ ನಿನ್ನಲಿದೆ ಆತ್ಮಸಾಕ್ಷಿಗಿಂತ ಬೇರೆ ಸಾಕ್ಷಿ ಅವಶ್ಯಕತೆ ಇಲ್ಲ ಸಂತೃಪ್ತಿಯೇ ನಿಜ ಸಿರಿತನ ಅತೀ ನಿರೀಕ್ಷೆ ಬೇಡ ಸದಾ ಪ್ರತಿಕ್ಷಣ ಜಾಗರೂಕತೆ ವಹಿಸಿ ಬುದ್ಧಿವಂತರ ಮುಂದೆ ವಾದಿಸ ಬೇಡ ಮೂರ್ಖರ ಮುಂದೆ ಜಾಣತನ ತೋರದಿರು ದೇವರ ನಂಬು ಮೌಢ್ಯತೆ ಬೇಡ ಸಂಪಾದಿನೆ ನಿನಗೆ ಅಪಾಯವಾಗದಿರಲಿ ಹವ್ಯಾಸಗಳು ಮನ ನೋಯಿಸದಿರಲಿ ಅತೀಯಾಗಿ ಯಾವುದೋ ಬೇಡ ಪರಿಸರ ಸ್ನೇಹಿಯಾಗಿ ಮಕ್ಕಳ ಸ್ನೇಹಿಯಾಗಿ ಸಂಗೀತ ಸ್ನೇಹಿಯಾಗಿ ನಿನ್ನಿಂದಾಗುವ ಸಹಾಯ ಹಸ್ತ ನೀಡಿ ಪ್ರತಿ ಜೀವಿಯ ಗೌರವಿಸಿ ಆಧರಿಸಿ ಗೌರವಿಸುವವರನ್ನು ನಿರ್ಲಕ್ಷಿಸಬೇಡಿ ಸುಭಾವವೇ ಸೌಭಾಗ್ಯ ಉತ್ತಮತನಕ್ಕೆ ಗೌರವಿಸಿ ಪುರಸ್ಕರಿಸಿ ನಮಸ್ಕರಿಸಿ ಸ್ಮರಿಸಿ ಹೆತ್ತವರ ಹಿರಿಯರ ಮುಂದೆ ಅಹಂ ಬೇಡ ನಯವಿನಯ ಮೃದುವಚನ ಶುದ್ಧತೆ ಭಾಷೆ ಮಾತನಾಡಿ. ಹೊನ್ನ ಚೆನ್ನುಡಿಗಳ ಬೆಳಕಿನಲ್ಲಿರಲಿ ಬದುಕು ಮಾದರಿತನದ ನಲಿವು.



**ಲೇಖನ-ದೇಶಂಸು**
**ಶ್ರೀ ಸುರೇಶ ಶಂಕ್ರೆಪ್ಪ ಅಂಗಡಿ**
**ಆರೋಗ್ಯ ನಿರೀಕ್ಷಣಾಧಿಕಾರಿ**
**"ವಿಶ್ವ ಮಾನವ ಜೀವ ರಕ್ಷಕ"**
**ಐಕಾನ್ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರು.**
**ಬಾಗಲಕೋಟೆ**

## ಉಪ ಔಷಧ ನಿಯಂತ್ರಕರಿಂದ ನಿರಂತರ ಕಲಿಕಾ ಕಾರ್ಯಕ್ರಮ




**ಇಲಕಲ್ಲ :** ಸಾರ್ವಜನಿಕರ ಆರೋಗ್ಯದ ಬಗ್ಗೆ ಔಷಧ ವ್ಯಾಪಾರಿಗಳು ಹೆಚ್ಚು ಕಾಳಜಿವಹಿಸ ಬೇಕಾದ ಅಗತ್ಯವಿದೆ, ವಿವೇಚನಾ ರಹಿತ ಔಷಧ ಮಾರಾಟವು ಜನ ಸಾಮಾನ್ಯರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಔಷಧಗಳನ್ನು ತಿಳಿದು ಬಳಸುವ ಅಗತ್ಯವಿದೆ ಎಂದು ಬೆಳಗಾಂವ ವಿಭಾಗದ ಉಪ ಔಷಧನಿಯಂತ್ರರಾದ ಡಾ, ಎಸ್. ನಾಗರಾಜ ಅವರು ತಿಳಿಸಿದರು. ಹುನಗುಂದ ಹಾಗೂ ಇಳಕಲ್ ತಾಲೂಕಾಔಷಧವ್ಯಾಪಾರಿಗಳಿಗಾಗಿಕಡಪಟ್ಟಿಫಾರ್ಮ ಹೌಸ್ನಲ್ಲಿ ನಿರಂತರ ಕಲಿಕಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಬಾಗಲಕೋಟೆ ವೃತ್ತದ ಸಹಾಯಕ ಔಷಧ ನಿಯಂತ್ರಕರಾದ ಶರಣಬಸಪ್ಪ ಹನಮನಾಳ, ಔಷಧ ಪರಿವೀಕ್ಷಕರಾದ ಅರುಣ ಕಠಾರಿ ಹಾಗೂ ಜನಪ್ರಿಯ ಹೃದಯ ರೋಗ ತಜ್ಞ ಡಾ. ಮಹಾಂತೇಶ ಕಡಪಟ್ಟಿ ಅವರು ಕಲಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಔಷಧ ವ್ಯಾಪಾರಿಗಳು ಹೊಸ ತಂತ್ರಜ್ಞಾನವನ್ನು ಅರಿತು ಬಳಸುವುದರಿಂದ ಪ್ರಯೋಜನವಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಂಘದ ಅಧ್ಯಕ್ಷರಾದ ಅಶೋಕ ಬಿಜ್ಜಳ ಅವರು ನಮ್ಮ ಔಷಧ ವ್ಯಾಪಾರಿಗಳು ಕಾನೂನಿಗೆ ಗೌರವ ನೀಡುತ್ತಾರೆ ಎಂದು ಹೇಳಿದರು. ಜಿಲ್ಲಾ ಸಂಘದ ಕಾರ್ಯದರ್ಶಿ ಆಗಿರುವ ಬಂಡು ಕಟ್ಟಿಅವರು ಮಾತನಾಡುತ್ತಾ ಔಷಧ ವ್ಯಾಪಾರಿಗಳು ಎದುರಿಸುವ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದರು. ಡಾ. ಮಹಾಂತೇಶ ಕಡಪಟ್ಟಿಯವರು ಇತ್ತೀಚೆಗೆ ಹುನಗುಂದ ವಿಜಯ ಮಹಾಂತೇಶ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾಗಿ ಆಯ್ಕೆಗೊಂಡಿದ್ದಕ್ಕಾಗಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಅಶೋಕ ಬಿಜ್ಜಳ ಅವರು ಸ್ವಾಗತ ಭಾಷಣ ಮಾಡಿದರು, ಡಾ. ಸಂತೋಷ ಪೂಜಾರ ಅತಿಥಿಗಳ ಪರಿಚಯ ಮಾಡಿದರು, ಪ್ರಭು ಬೀಳಗಿ ವಂದನಾರ್ಪಣೆ ಮಾಡಿದರು. ಗೋಪಾಲ ಢಗೆ ಪ್ರಾರ್ಥನಾ ಗೀತೆ ಹಾಡಿದರು, ಮಹಾಂತೇಶ ಹಳ್ಳೂರ ಕಾರ್ಯಕ್ರಮವನ್ನು ನಿರೂಪಿಸಿದರು. ವೇದಿಕೆಯ ಮೇಲೆ ಹುನಗುಂದ ಸಂಘದ ಅಧ್ಯಕ್ಷರಾದ ಅನ್ನದಾನಿ ಹಾದಿಮನಿ ಹಾಗೂ ಇಳಕಲ್ ಸಂಘದ ಶರಣಬಸಯ್ಯ ಗಣಾಚಾರಿ ಅವರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಪ್ರತಾಪ್. ವಾಯ್.ಕಿಳ್ಳಿ.ಇಲಕಲ್ಲ**

## ಸಾಮೂಹಿಕ ವಿವಾಹ ಇತರ ಸಮುದಾಯಕ್ಕೆ ಮಾದರಿಯಾಗಿದೆ: ಮಾಜಿ ಅಧ್ಯಕ್ಷ ಸೈಯದ್ ಸಮೀವುಲ್ಲಾ



**ಕಮಲಾಪುರ :** ಮದುವೆಗೆ ಸಾಲ ಸೂಲಾ ಮಾಡಿ ಕಷ್ಟಕ್ಕೆ ಸಿಲುಕುವ ಬಡ ಕುಟುಂಬಗಳಿಗೆ ಹೊರೆ ಯಾಗಬಾರದುಎನ್ನುವದೃಷ್ಟಿಯಿಂದ ಡಾ.ಅಂಬೇಡ್ಕರ್ ನಗರದ ಜನ ಪ್ರತಿ ವರ್ಷ ಸಾಮೂಹಿಕ ವಿವಾಹಗಳನ್ನು ಮಾಡಿಸುತ್ತಿರುವುದು ಬೇರೊಂದು ಸಮಾಜಕ್ಕೆ ಮಾದರಿಯಾಗಿದೆ. ಹೆಚ್ಚಿನ ಹಣ ಖರ್ಚು ಮಾಡಿ ಮದುವೆ ಮಾಡಿಸಿ ಇನ್ನಷ್ಟು ಕಷ್ಟ ಅನುಭವಿಸಬಾರದು ಮದುವೆಯ ನಂತರ ಸಾಲವಿಲ್ಲದೆ ಸಂತೋಷದಿಂದ ಬಾಳಬೇಕು ಎಂದು ಪ್ರತಿ ವರ್ಷ ಸಾಮೂಹಿಕ ಮದುವೆಗಳನ್ನುಮಾಡಿಸುವ ಕಾರ್ಯಗಳನ್ನುಮಠದ ಕಡೆಯಿಂದ ಮಾಡುತ್ತಿರುವುದು ನಮಗೆ ಅತೀವ ಸಂತಸ ತಂದಿದೆ ಇದೇ ರೀತಿ ಎಲ್ಲಾ ಸಮಾಜಗಳಲ್ಲಿ ಬಡವರಿಗೆ ಮದುವೆ ಮಾಡಿಸುವ ಕಾರ್ಯಗಳು ನಡೆಯಬೇಕು ಎಂದು ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ಸೈಯದ್ ಸಮೀವುಲ್ಲಾ ಹೇಳಿದರು.

ಕಮಲಾಪುರ ಪಟ್ಟಣದ ಡಾ. ಬಿ ಆರ್ ಅಂಬೇಡ್ಕರ್ ನಗರದ ಶ್ರೀ ಗುರು ವೀರೇಶಪ್ಪ ಅವದೂತರ ಮಠ ಮತ್ತು ಜ್ಞಾನಶ್ರಮ ಟ್ರಸ್ಟ್ ಕಡೆಯಿಂದ ಸಾಮೂಹಿಕ ವಿವಾಹವನ್ನು ಬುದುವಾರ ಏರ್ಪಡಿಸಲಾಗಿತ್ತು. ಈ ಸಾಮೂಹಿಕ ವಿವಾಹವದಲ್ಲಿ 13 ಜೋಡಿಗಳು ಭಾಗಿಯಾಗಿ ಸಪ್ತಪದಿ ತುಳಿದರು.

ಮಾಜಿ ಸಚಿವ ಆನಂದ್ ಸಿಂಗ್ ನವ ಜೋಡಿಗಳಿಗೆ ಅಕ್ಷತಾ ಹಾಕುವ ಮೂಲಕ ಆಶೀರ್ವದಿಸಿ ಉತ್ತಮ ಜೀವನದ ಬದುಕಿಗೆ ಸಲಹೆ ನೀಡಿದರು.

ಈ ಸಂಧರ್ಭದಲ್ಲಿ ಸಿದ್ದಾರ್ಥ್ ಸಿಂಗ್ ಮಾತನಾಡಿ ವಿರೇಶಪ್ಪ ಅವರ 50 ನೇ ಪುಣ್ಯ ಸ್ಮರಣೆಯ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಸಾಮೂಹಿಕ ಮದುವೆಗಳು ಸಮಾಜ ಹಿಂದಿನಿಂದಲೂ ಜಾತ್ಯಾತೀತವಾಗಿ ಮಾಡಿಸುತ್ತಾ ಬಂದಿದೆ ಎಂದು ಕೇಳಿದ್ದ ಇಂದು ಕಣ್ಣಾರೆ ನೋಡುವ ಭಾಗ್ಯ ನನಗೆ ಸಿಕ್ಕಿದೆ. ಈ ಧಾರ್ಮಿಕ ಮದುವೆ ವ್ಯವಸ್ಥೆಗಳು ಸಾರ್ವಜನಿಕರಲ್ಲಿ ಸಂತಸಮೂಡಿಸಿದೆ. ಈ ಸಂಬಂಧ ಬಡ ಕುಟುಂಬಗಳ ತಂದೆ ತಾಯಿಗಳಿಗೆ ನನ್ನ ಮಕ್ಕಳಿಗೆ ನಾನು ಮದುವೆ ಮಾಡಬಹುದು ಎನ್ನುವ ಆತ್ಮ ಸ್ಥೈರ್ಯ ತಂದಿದೆ. ಹಣ ದುಬ್ಬರದಿಂದ ತತ್ತರಿಸಿರಿವಂತ ಅದೆಷ್ಟೋ ಬಡ ಕುಟುಂಬಗಳಿಗೆ ವೀರೇಶಾನಂದ ಅವಧೂತರ ಮಠ ಬಡ ಜನಗಳಿಗೆ ಮದುವೆ ಮಾಡಿ ಕೊಳ್ಳಲು ದಾರಿ ದೀಪವಾಗಿದೆ. ಇದರ ಜೊತೆಗೆ ಇಂದಿನ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಯುವಕರು ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಟ್ಟು ತಮ್ಮ ಭವಿಷ್ಯವನ್ನು ಕಟ್ಟಿ ಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಕುರಿತು ಕಮಲಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಖಾಜಾ ಹುಸೇನ್, ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಹೆಚ್ ಗೋಪಾಲಕೃಷ್ಣ ಮಾತನಾಡಿದರು. ಪರಸಪ್ಪ, ಹುಲುಗಪ್ಪ, ಕೃಷ್ಣ, ಕೋಳೂರು ಹುಲಿಗೆಮ್ಮ, ಶಿವಮ್ಮ, ಇವರ ತಂಡದ ಸುಪ್ರಸಿದ್ಧ ಕಲಾವಿದರಿಂದ 5 ದಿನ ಭಜನೆ, ಮಠದಲ್ಲಿ ಪ್ರವಚನ ಹಾಗೂ ಅನ್ನಸಂತರ್ಪಣೆ, ಸಾಯಂಕಾಲ ಹೂವಿನ ತೇರು ಎಳೆಯುವ ಕಾರ್ಯಕ್ರಮದಲ್ಲಿ ವಿಶೇಷವಾಗಿ ಸಾಂಪ್ರದಾಯಿಕ ಉಡುಗೆಗಳನ್ನು ಕಳಶಗಳನ್ನು ಹೊತ್ತ ನೂರಾರು ಜನ ಮಹಿಳಾ ಮಣಿಗಳು ವಿವಾಹಕ್ಕೆ ಸಾಕ್ಷಿಯಾದರು.

ಡಾ, ಬಿ ಆರ್ ಅಂಬೇಡ್ಕರ್ ನಗರದ ಮುಖಂಡರಾದ, ಪೂಜಾರಿ ಕೆಂಚಪ್ಪ,
ದಲ್ಲಾಳಿ ದುರುಗಪ್ಪ, ದೇವಪ್ರಿಯಾ,ಕೆ ಮಲ್ಲೇಶಪ್ಪ, ಹನುಮಂತಪ್ಪ ಬಾರೆಮರ, ಕಾಡಪ್ಪ, ಮಲ್ಲೇಶಪ್ಪ, ಮಧುಗುಣಿಕೆ ವೆಂಕಟೇಶ್, ಆರ್ ಶೇಖರ್, ವಕೀಲ ಹೆಚ್.ಸೋಮಶೇಖರ್,ಹಾಗೂಪಟ್ಟಣಪಂಚಾಯತಿ ಸದಸ್ಯರಾದ,ಹೆಚ್ ಗೋಪಾಲಕೃಷ್ಣ,ಸರಿತಾ ವೀರೇಶ್, ಕನ್ನೇಶ್ವರ ದೇವರಮನೆ, ಪಾಲಪ್ಪ, ಚಂದ್ರಣ್ಣ, ಎಮ್. ವೆಂಕಟೇಶ್, ಬ್ರಾಂದಿ ಶಾಪ್ ಕೃಷ್ಣ, ಎ. ಚಿದಾನಂದ, ಎನ್.ಶಿವರಾಮ, ವೀರಶ್ ಕೊಟ್ಟಾಲು, ಗುತ್ತಿಗೆದಾರ ಮಲ್ಲಿಕಾರ್ಜುನ, ಎನ್ ಶರಣಪ್ಪ, ಕೆಂಪು ವೀರೇಶ, ಹೆಚ್ ಆನಂದ ಇತರರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮಾಲತೇಶ್.ಶೆಟ್ಟರ್. ಹೊಸಪೇಟೆ**

## ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ರಕ್ತದಾನ ಶಿಬಿರ ಮತ್ತು ಪ್ರಬಂಧ ಸ್ಪರ್ಧೆಯನ್ನು ಆಯೋಜನೆ




**ಕಲಬುರ್ಗಿ :** ಜಮಾತೆ ಇಸ್ಲಾಮಿ ಹಿಂದ್, ಇಂದಿನಿಂದ 10 ದಿನಗಳ ಕಾಲ ಸುದೀರ್ಘ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಮಾತೆ ಇಸ್ಲಾಂ ಹಿಂದ ಮುಖಂಡರು ನಗರದಲ್ಲಿ ಇಂದು ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದರು ಕರ್ನಾಟಕವು ಈ ಕೆಳಗಿನ ಉದ್ದೇಶಗಳೊಂದಿಗೆ 13 ರಿಂದ 22 ಸೆಪ್ಟೆಂಬರ್ 2024 ರವರೆಗೆ 10 ದಿನಗಳ ಸುದೀರ್ಘ ಅಭಿಯಾನವನ್ನು ಆಚರಿಸುತ್ತಿದೆ:

1) ಪ್ರವಾದಿಯನ್ನು ಇಡೀ ಮನುಕುಲದ ಸಾರ್ವತ್ರಿಕ ನಾಯಕ ಎಂದು ಪರಿಚಯಿಸುವುದು.2) ಅವರ ಮಾನವೀಯ ಮತ್ತು ಉದಾತ್ತ ಬೋಧನೆಗಳನ್ನು ವ್ಯಾಪಕವಾಗಿ ಪ್ರಸಾರ ಮಾಡುವುದು ಮತ್ತು ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವುದು.3) ನಮ್ಮ ಸಮಾಜವನ್ನು ಬಾಧಿಸುವ ಸಮಸ್ಯೆಗಳಿಗೆ ಪರಿಹಾರವನ್ನು ಬೋಧನೆಗಳ ಬೆಳಕಿನಲ್ಲಿ ತೋರಿಸುವುದು. ಪ್ರವಾದಿಗಳು. 4) ಮನುಕುಲಕ್ಕೆ ಸತ್ಯದ ಸಾಕ್ಷಿಗಳಾಗಿ ನಿಲ್ಲುವಂತೆ ಮುಸ್ಲಿಮರನ್ನು ನೆನಪಿಸುವುದು. ಈ ಅಭಿಯಾನದ ಭಾಗವಾಗಿ ನಮ್ಮ ರಾಜ್ಯದ ಲಕ್ಷಾಂತರ ಜನರನ್ನು ವೈಯಕ್ತಿಕ ಸಭೆಗಳು, ಸಭೆಗಳು, ಉಪನ್ಯಾಸಗಳು, ಪ್ರಬಂಧ ಸ್ಪರ್ಧೆಗಳ ಮೂಲಕ ತಲುಪಲು ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸಲಾಗಿದೆ. ಸೆಮಿನಾರ್ಗಳು, ಸಾರ್ವಜನಿಕ ಪ್ರವಚನಗಳು ಮತ್ತು ಮುದ್ರಣ ಮತ್ತು ದೃಶ್ಯ ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮಗಳ ಮೂಲಕ. ಪ್ರವಾದಿಯವರ ಜೀವನ ಮತ್ತು ಬೋಧನೆಗಳ ಕುರಿತ ಫೋಲ್ಡರ್ಗಳು ಮತ್ತು ಪುಸ್ತಕಗಳನ್ನು ವ್ಯಾಪಕವಾಗಿ ಪ್ರಸಾರ ಮಾಡಲಾಗುತ್ತದೆ. ಅಭಿಯಾನದ ಭಾಗವಾಗಿ ಯೋಜಿಸಲಾದ ಹೆಚ್ಚುವರಿ ಚಟುವಟಿಕೆಗಳು:

1. ಸೆಪ್ಟೆಂಬರ್ 15 ರಂದು ಹಿದಾಯತ್ ಕೇಂದ್ರದಲ್ಲಿ ರಕ್ತದಾನ ಶಿಬಿರ
2. ಪ್ರವಾದಿ ಮುಹಮ್ಮದ್ (ಕಃಗಉೂ) ಅವರ ಜೀವನದ ಕುರಿತು ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ ಪ್ರಬಂಧ ಬರವಣಿಗೆ ಸ್ಪರ್ಧೆ
3. ಸಾರ್ವಜನಿಕರಿಗಾಗಿ ಸೀರತ್ ಪ್ರವಚನ 22ನೇ ಸೆಪ್ಟೆಂಬರ್ 2024 ರಂದು ಕಲಬುರಗಿಯ ರಂಗ ಮಂದಿರದಲ್ಲಿ ನಡೆಯಲಿದೆ.
4. ಸಮಾಜದ ಪ್ರಮುಖ ವ್ಯಕ್ತಿಗಳನ್ನು ಭೇಟಿ ಮಾಡುವುದು ಮತ್ತು ಅವರಿಗೆ ಓದಲು ಸಾಹಿತ್ಯವನ್ನು ನೀಡುವುದು

ಇದರಿಂದ ಪ್ರೀತಿ, ವಿಶ್ವಾಸ ಮತ್ತು ಮಾನವೀಯತೆಯ ವಾತಾವರಣ ನಿರ್ಮಾಣವಾಗುತ್ತದೆ ಮತ್ತು ಸಮಾಜದಲ್ಲಿ ಕೋಮು ಸೌಹಾರ್ದತೆ ಮತ್ತು ನೈತಿಕ ಉನ್ನತಿಯನ್ನು ಬೆಳೆಸಲು ಇದು ಸಹಾಯ ಮಾಡುತ್ತದೆ ಎಂದು ಆಶಿಸಲಾಗಿದೆ.

**ವರದಿ : ಇಮ್ರಾನ್ ಖಾನ್ ಕಲಬುರಗಿ**

## ನಾಗರಿಕರಿಗೆ ಆರೋಗ್ಯದ ಕುರಿತು ಕಾಳಜಿ ವಹಿಸಲು: ಶಾಸಕ ನಾಡಗೌಡ ಮನವಿ



**ತಾಳಿಕೋಟಿ :** ಖಾಸಗಿ ಆಸ್ಪತ್ರೆಗಳಲ್ಲಿ ಹೆಚ್ಚು ದುಡ್ಡನ್ನು ಕಟ್ಟಿ ಡಯಾಲಿಸಿಸ್ ಮಾಡಿಕೊಳ್ಳುವುದು ಬಡ ರೋಗಿಗಳಿಗೆ ತುಂಬಾ ಕಷ್ಟದ ಕೆಲಸ ಅದು ಈಗ ಇಲ್ಲಿಯೇ ಸರಳವಾಗಿ ಆಗುವಂಥಾಗಲು ಈ ಡಯಾಲಿಸಿಸ್ ಕೇಂದ್ರವನ್ನು ಆರಂಭಿಸಲಾಗಿದೆ ಇದರಿಂದ ಬಡ ಜನರಿಗೆ ಹೆಚ್ಚು ಅನುಕೂಲವಾಗುತ್ತದೆ ಎಂದು ಕರ್ನಾಟಕ ಸರ್ಕಾರದ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್.ನಾಡಗೌಡ (ಅಪ್ಪಾಜಿ) ಹೇಳಿದರು. ಗುರುವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ವಿಜಾಪೂರ, ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಮುದ್ದೇಬಿಹಾಳ, ಸಮುದಾಯ ಆರೋಗ್ಯ ಕೇಂದ್ರ ತಾಳಿಕೋಟಿ ಹಾಗೂ ಡಿಸಿಡಿಸಿ ಕಿಡ್ನಿ ಕೇರ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಡಯಾಲಿಸಿಸ್ ಕೇಂದ್ರ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಂದು ಈ ಸಮುದಾಯ ಕೇಂದ್ರದಲ್ಲಿ ಎರಡು ಕೃತಕ ರಕ್ತ ಪರಿಶುದ್ಧಗೊಳಿಸುವ ಯಂತ್ರಗಳನ್ನು(ಡಯಾಲಿಸಿಸ್) ಆರಂಭಿಸಲಾಗಿದೆ. ಇದರಿಂದ ಸುಮಾರು ಆರು ರೋಗಿಗಳನ್ನು ಡಯಾಲಿಸಿಸ್ ಮಾಡಬಹುದು ಮುಂದೆ ಬೇಡಿಕೆ ಹೆಚ್ಚಾದಲ್ಲಿ ಮತ್ತೆ ಹೆಚ್ಚುವರಿ ಯಂತ್ರಗಳನ್ನು ಸ್ಥಾಪಿಸಲಾಗುವುದು. ಈ ಯಂತ್ರಗಳಿಂದ ಬಡವರಿಗೆ ಹೆಚ್ಚು ಅನುಕೂಲವಾಗಲಿದೆ. ಆರೋಗ್ಯದ ಕುರಿತು ಎಲ್ಲರೂ ಕಾಳಜಿ ವಹಿಸಿ ಎಂದ ಅವರು ಸಮುದಾಯ ಕೇಂದ್ರದಲ್ಲಿ ಕೆಲವು ಸಮಸ್ಯೆಗಳು ಇರುವುದು ನಿಜ ಅವುಗಳನ್ನು ಪರಿಹರಿಸುವ ಪ್ರಯತ್ನ ನಿರಂತರವಾಗಿ ನಡೆಯುತ್ತಿದೆ. ಈ ಆಸ್ಪತ್ರೆಯನ್ನು ತಾಲೂಕ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸುತ್ತಿದ್ದೇನೆಅದು ಮಂಜೂರಾದಲ್ಲಿ ಎಲ್ಲಸಮಸ್ಯೆಗಳೇಕೆಪರಿಹಾರಸಿಗಲಿದೆಸಾರ್ವಜನಿಕರು ವೈದ್ಯರೊಂದಿಗೆ ಸಹಕರಿಸಬೇಕು ಎಂದರು. ಈ ಸಮಯದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಸಂಪತ್ ಗುಣಾರಿ.ಡಿಟಿಒ ಡಾ.ಎಂ.ಬಿ.ಬಿರಾದಾರ. ಆರ್.ಸಿ. ಎಚ್.ಓ.ಡಾ.ಕೆ.ಡಿ.ಗುಂಡಬೌಡಿ. ಮುಖಂಡರಾದ ಬಿ.ಎಸ್.ಪಾಟೀಲ ಯಾಳಗಿ. ವೀರಪಾಕ್ಷಯ್ಯ ಹಿರೇಮಠ. ಎಂ.ಕೆ. ಚೋರಗಸ್ತಿ. ಸಿದ್ದನಗೌಡ ಪಾಟೀಲ ನಾವದಗಿ. ಪ್ರಭುಗೌಡ ಮದರಕಲ್. ಮಡು ಸಾಹುಕಾರ ಬಿರಾದಾರ. ವಿಜಯಸಿಂಗ್ ಹಜೇರಿ. ಸಂಗನಗೌಡ ಅಸ್ಕಿ. ಯಾಸೀನ್ ಮಮದಾಪೂರ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ. ಪರಶುರಾಮ ತಂಗಡಗಿ. ನೀಲಮ್ಮ ಪಾಟೀಲ.ಮೋದಿನಸಾ ನಗಾರ್ಚಿ. ಜೈ ಭೀಮ್ ಮುತ್ತಗಿ. ಶಿವರಾಜ ಗುಂಡಕನಾಳ. ಫಯಾಜ್ ಉತ್ನಾಳ. ಆರೀಫ್ ಹೊನ್ನುಟಗಿ. ಶಫಿ ಇನಾಮದಾರ. ಸದ್ದಾಮ್ ಹೊನ್ನಳ್ಳಿ. ಆಸಿಫ್ ಕೆಂಭಾವಿ.ಡಿಎಂಒ ಜಾನ್ ಕಟವಟಿ. ಟಿಎಚ್ಒ ಡಾ.ಸತೀಶ ತಿವಾರಿ. ಆಡಳಿತ ವೈದ್ಯಾಧಿಕಾರಿ ಡಾ. ಶ್ರೀಶೈಲ ಹುಕ್ಕೇರಿ.ಡಾ. ವಿಜಯಲಕ್ಷ್ಮಿ ಹಜೇರಿ.ಡಾ.ಮಧುಬಾಲಾ ಸಿಂಘಾಲ. ಡಾ.ಹರೇರಾಮ ಪಿ.ಡಾ. ಅರುಣ ಮದರಕಲ್ ಆಸ್ಪತ್ರೆ ಸಿಬ್ಬಂದಿಗಳು ಮತ್ತಿತರರು ಇದ್ದರು.

## ವಿಶ್ವಸಂಸ್ಥೆಯ ಘೋಷಿತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಆಚರಣೆ: ಬಿಇಓ ಸಾವಳಗಿ



**ನಾಲತವಾಡ :** ರಾಜ್ಯ ಸರ್ಕಾರದ ಆದೇಶದಂತೆ ಇದೇ ಸಪ್ಟಂಬರ್ 15ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಬೀದರ್ನಿಂದ ಚಾಮರಾಜನಗ ರದವರೆಗೆ ವಿಶ್ವದ ಅತಿ ಉದ್ದದ ಮಾನವ ಸರಪಳಿ ನಿರ್ಮಿಸುವ ಮೂಲಕ ಆಚರಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು ತಾಲ್ಲೂಕಿನ ಶಾಲಾ ಮಕ್ಕಳೊಂದಿಗೆ ನಾವು ಅದರ ಅವಿಭಾಜ್ಯ ಅಂಗವಾಗಿದೆ ಭಾಗವಹಿಸೋಣ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಹೇಳಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಪೂರ್ವಭಾವಿ ಸಭೆಯು ಪಟ್ಟಣದ ಶ್ರೀ ವೀರೇಶ್ವರ ಕಾಲೇಜಿನಲ್ಲಿ ಜರುಗಿದ ಹೋಬಳಿಯ ಶಾಲೆಯ ಮುಖ್ಯಗುರುಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು,

ಪ್ರಜಾಸತ್ತಾತ್ಮಕ ತತ್ವಗಳು ಮತ್ತು ಪ್ರವರ್ಧಮಾನಕ್ಕೆ ಬರುತ್ತಿರುವ ಪ್ರಜಾಪ್ರಭುತ್ವದ ಕಡೆಗೆ ಕರ್ನಾಟಕದ ನಿರಂತರ ಬದ್ಧತೆ ಪ್ರದರ್ಶಿಸಲು ಬೀದರ್ನಿಂದ ಚಾಮರಾಜನಗರದ ವರೆಗೆ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ತಾಲ್ಲೂಕಿನ ನಾಲತವಾಡ ಹೋಬಳಿಯ ದಾರಿಯುದ್ದಕ್ಕೂ ಪಸರಿಸುವ ಕೆಲಸವನ್ನು ಮಕ್ಕಳೊಂದಿಗೆ ಶಿಕ್ಷಕರು ಮಾಡಬೇಕು. ರಾಜ್ಯದಲ್ಲಿ ನಡೆಯುತ್ತಿರುವ ಇದು ವಿಶ್ವದಲ್ಲಿಯೇ ಅತಿ ಉದ್ದದ ಮಾನವ ಸರಪಳಿಯಾಗಲಿದೆ ಎಂದರು.

ಪ್ರತಿ ಕಿಲೋಮೀಟರ್ಗೆ ಸರಾಸರಿ 1,000 ಕ್ಕೂ ಹೆಚ್ಚು ವಿದ್ಯಾರ್ಥಿಗಳು , ಜನರು ಭಾಗವಹಿಸುವ ನಿರೀಕ್ಷೆಯಿದ್ದು, ಲಕ್ಷಾಂತರ ಜನರು ಇದರಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಮಾನವ ಸರಪಳಿಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಪ್ರಜಾಪ್ರಭುತ್ವದ ಅಡಿಯಲ್ಲಿರುವ ಬ್ಯಾನರ್ ಮತ್ತು ಪೋಸ್ಟರ್ಗಳನ್ನು ಪ್ರದರ್ಶಿಸಬೇಕು ಎಂದರು.

ಬಿಆರ್ ಪಿ ಯು.ಬಿ. ಧರಿಕಾರ ಮಾತನಾಡಿ, ಇಲಾಖೆ ಬಯಸಿದ ಮಾಹಿತಿಯನ್ನು ಮುಖ್ಯ ಶಿಕ್ಷಕರು ಸಕಾಲದಲ್ಲಿ ಒದಗಿಸಬೇಕು , ೩ಟಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಇಲಾಖೆ ಕೈಗೊಂಡಿರುವ ಕಾರ್ಯಕ್ರಮಗಳನ್ನು ತಪ್ಪದೇ ಅನುಷ್ಠಾನಕ್ಕೆ ತರಬೇಕು ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಯು.ಬಿ.ಧರಿಕಾರ,ಸರ್ಕಾರಿ ಉರ್ದು ಪ್ರೌಢಶಾಲೆ ಮುಖ್ಯೋಪಾದ್ಯಾಯ ಜಗದೀಶ ಸಜ್ಜನ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಮುದ್ನೂರ,ಮುರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲರು, ವೀರೇಶ್ವರ ಪಿಯು ಕಾಲೇಜಿನ ಪ್ರಾಚಾರ್ಯ ಡಾ.ಡಿ.ಆರ್.ಮಳಖೇಡ, ಡಿಎಡ್ ಕಾಲೇಜಿನ ಪ್ರೊ ಹೂಗಾರ,ಎಸ್.ವಿ.ನಾಯಕ,ಇಸಿಒ ಎ.ಬಿ.ಬಗಲಿ,ಬಿಆರ್ ಸಿ ಸಿದ್ದನಗೌಡ ಬಿಜ್ಜೂರ,ಸಿಆರ್ ಪಿ ಎಚ್.ಜಿ.ಭೂವಿ,ಗುಂಡು ಚವ್ಹಾಣ ಸೇರಿದಂತೆ ಇತರರು ಇದ್ದರು.

## ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಸಾರ್ವಜನಿಕರು ಮುಕ್ತವಾಗಿ ಬಾಗವಹಿಸಲು ಜಿಲ್ಲಾಧಿಕಾರಿ ಸುಶೀಲಾ ಬಿ. ಮನವಿ




**ಯಾದಗಿರಿ :** ಸಪ್ಟಂಬರ್ 15ರಂದು ಕರ್ನಾಟಕ ಸರ್ಕಾರ ಹಾಗೂ ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಆಚರಿಸುತ್ತಿರುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಯಾದಗಿರಿ ಜಿಲ್ಲೆಯ ಎಲ್ಲಾ ಸಾರ್ವಜನಿಕರು, ಪತ್ರಕರ್ತರು ಮಾಧ್ಯಮ ಮಿತ್ರರು, ವಿವಿಧ ಸಂಘ ಸಂಸ್ಥೆಯ ಅಧ್ಯಕ್ಷರು,ಪಧಾದಿಕಾರಿಗಳು ಮುಕ್ತವಾಗಿ ಕಾರ್ಯಕ್ರಮದಲ್ಲಿ ಬಾಗವಹಿಸಲು ಯಾದಗಿರಿ ಜಿಲ್ಲಾಧಿಕಾರಿ ಸುಶೀಲ ಬಿ ಅವರೂ ಮನವಿ ಮಾಡಿದ್ದಾರೆ.

ನಂತರ ಮಾತನಾಡಿದ ಅವರೂ ಯಾದಗಿರಿ ಜಿಲ್ಲೆಯ ಯರಗೋಳದಿಂದ ರಾಯಚೂರ ಜಿಲ್ಲೆಯ ಗಡಿಬಾಗ ಗೂಗಲ್ ಬ್ರಿಡ್ಜ್ ನ ಸುಮಾರು 61 ಕಿಲೋ ಮೀಟರ್ ವರೆಗೆ ಮಾನವ ಸರಪಳಿಯನ್ನು ವಿಶೇಷವಾಗಿ ಸರ್ಕಾರದಿಂದ ಹಮ್ಮಿಕೊಂಡಿದ್ದೂ ಈ ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಶಿಕ್ಷಕಿಯರು, ವಿವಿಧ ಸಂಘಟನೆಯ ಅಧ್ಯಕ್ಷರು ಕಾರ್ಯಕ್ರಮದಲ್ಲಿ ಬಾಗವಹಿಸಿ ಕಾರ್ಯಕ್ರಮವನ್ನೂ ಯಶಸ್ವಿಗೊಳಿಸಲು ಮನವಿ ಮಾಡಿದರು.

**ವರದಿ : ಶಿವು ರಾಠೋಡ**

## ಯುನಿಸೆಫ್, ಮೈಸೂರು ಪತ್ರಿಕೋದ್ಯಮ ವಿಭಾಗದಿಂದ ಶಾಲಾ ಮಕ್ಕಳಿಗೆ ವರದಿಗಾರಿಕೆ ತರಬೇತಿ

**ಮುದ್ದೇಬಿಹಾಳ :** ಯುನಿಸೆಫ್ ಮೈಸೂರು ವಿಭಾಗದ ಹಾಗು ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಬುಧವಾರ ಮಕ್ಕಳ ಕುರಿತು ಪತ್ರಿಕಾ ವರದಿಗಾರಿಕೆ, ಬದಲಾವಣೆಗೆ ಮಾಧ್ಯಮ ಎಂಬ ಶೀರ್ಷಿಕೆ ಅಡಿಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಈ ಕಾರ್ಯಕ್ರಮವನ್ನು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ್ವರ ಬಬಲೇಶ್ವರ ಉದ್ಘಾಟಿಸಿದರು. ಕುಲಪತಿ ಬಿ.ಕೆ.ತುಳಸಿಮಾಲಾ, ಯುನಿಸೆಫ್ ಚೇರ್ಮನ್ ಪ್ರಸೂನ್ ಸೇನ, ಶಂಕರಗೌಡ ಸೋಮನಾಥ, ಓಂಕಾರಗೌಡ ಕಾಕಡೆ, ಎಂ.ಎಸ್. ಸ್ವಪ್ನನಾಯ್ಕ, ಸಂದೀಪ್, ವಾಸುದೇವ ಶರ್ಮಾ ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.



## ಶಾಸಕರಿಂದ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ




**ಜಮಖಂಡಿ :** ಭಾರತೀಯ ಜನತಾ ಪಕ್ಷವನ್ನು ಡಾ. ಶ್ಯಾಮಾಪ್ರಸಾದ ಮುಖರ್ಜಿ ಹಾಗೂ ಪಂಡಿತ ದೀನದಯಾಳ ಉಪಾಧ್ಯಾಯರು ಕಟ್ಟಿ ಬೆಳೆಸಿದ್ದಾರೆ. ಅವರ ಪರಿಶ್ರಮದ ಫಲವಾಗಿ ಇಂದು ಬೃಹದಾಕಾರದಲ್ಲಿ ಬೆಳೆದಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಅಪ್ಪಾಸಾಹೇಬ ವಿಠ್ಠಲ ಮಂದಿರದಲ್ಲಿ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಪಕ್ಷವನ್ನು ಕಟ್ಟಿ ಬೆಳೆಸಿರುವ ಹಿರಿಯ ಕಾರ್ಯಕರ್ತರ ಪರಿಶ್ರಮ ಮತ್ತು ಅನುಭವಿಸಿದ ಕಷ್ಟಗಳನ್ನು ಕಾರ್ಯಕರ್ತರು ಮರೆಯಬಾರದು. ನಗರ ಹಾಗೂ ಗ್ರಾಮೀಣ ಮಂಡಲದ ಪ್ರತಿ ವಾರ್ಡಗಳ ಬೂತಮಟ್ಟದಲ್ಲಿ ಕನಿಷ್ಠ 300 ಸದಸ್ಯರನ್ನು ನೊಂದಾಯಿಸಬೇಕು. ಈ ನಿಟ್ಟಿನಲ್ಲಿ ಎಲ್ಲ ಬೂತಮಟ್ಟದ ಪ್ರಮುಖರು ತಂಡಗಳನ್ನು ರಚಿಸಿ ಸದಸ್ಯತ್ವದ ದೂರವಾಣಿ ಸಂಖ್ಯೆ 8800002024 ಗೆ ಮಿಸ್ ಕಾಲ್ ನೀಡುವದರ ಮೂಲಕ ತಮ್ಮ ತಮ್ಮ ವಾರ್ಡಗಳಲ್ಲಿ ಸಕ್ರೀಯ ಸದಸ್ಯರ ಸಂಖ್ಯೆಯನ್ನು ಹೆಚ್ಚಿಸಬೇಕು. ಈಗಾಗಲೇ ಸದಸ್ಯತ್ವವನ್ನು ಹೊಂದಿದವರು ತಮ್ಮ ಸದಸ್ಯತ್ವವನ್ನು ನವೀಕರಿಸಬೇಕು ಎಂದರು.

ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನದಲ್ಲಿ ಪದಾಧಿಕಾರಿಗಳಾದ ಅರವಿಂದಗೌಡ ಪಾಟೀಲ, ಡಾ.ರಾಕೇಶ ಲಾಡ್, ಗುರುಪಾದಪ್ಪ ಮೆಂಡಿಗೇರಿ, ಗಣೇಶ ಶಿರಗಣ್ಣವರ, ಶ್ರೀಧರ ಕಂಬಿ, ವಿಶ್ವಾಸ ಪಾಟೀಲ, ರಾಜು ಚಿಕನಾಳ, ದೀಪಕ ಕದಂ, ಸಂಜೋತಾ ಗೊರನಾಳ, ಶ್ರೀಶೈಲ ರಾಂಬಳ್ಳಿ, ಗಡಾದ, ಶಂಕರ ಕಾಳೆ, ಕಾಶಿನಾಥ ಚೆನ್ನವೀರ, ಕುಶಾಲ ವಾಗ್ಮೋರೆ, ಸಿದ್ದು ನ್ಯಾಮಗೌಡ, ವಿನಾಯಕ ಗೌಳಿ, ಗೊವಿಂದ ಮೂಡಲಗಿ, ಅಣ್ಣಪ್ಪ ಶಿಕ್ಕಲಗಾರ, ರಾಜು ಕಡಕೋಳ ಸಹಿತ ಹಲವರು ಇದ್ದರು.

# ಸರಕಾರ ಶಿಕ್ಷಕರ ಹುದ್ದೆ ಭರ್ತಿ ಮಾಡಲಿ: ಶಾಸಕ ಗುಡಗುಂಟಿ



**ಜಮಖಂಡಿ :** ರಾಜ್ಯದಲ್ಲಿ ಖಾಲಿವಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಂತೆ, ಉತ್ತಮ ಶೈಕ್ಷಣಿಕ ವ್ಯವಸ್ಥೆ ನಿರ್ಮಿಸುವಂತೆ ಶಾಸಕ ಜಗದೀಶ ಗುಡಗುಂಟಿ ಸರ್ಕಾರಕ್ಕೆ ಒತ್ತಾಯಿಸಿದರು.

ನಗರದ ಬಸವಭವನದಲ್ಲಿ ಜಿಪಂ, ಶಿಕ್ಷಣ ಇಲಾಖೆ, ಶಿಕ್ಷಕರ ಕಲ್ಯಾಣ ನಿಧಿ, ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ತಾಲೂಕಾಡಳಿತ ಹಮ್ಮಿಕೊಂಡಿದ್ದ ಸರ್ವಪಲ್ಲಿ ಡಾ.ರಾಧಾಕೃಷ್ಣನರ ಜನ್ಮದಿನ ಮತ್ತು ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಖಾಲಿವಿರುವ ಶಿಕ್ಷಕರ ಹುದ್ದೆಗಳನ್ನು ರಾಜ್ಯ ಸರ್ಕಾರ ಭರ್ತಿ ಮಾಡಬೇಕು. ಅತಿಥಿ ಉಪನ್ಯಾಸಕರ ಸಮಸ್ಯೆಗಳನ್ನು ಆಲಿಸಿ ಸೂಕ್ತವಾದ ನಿರ್ಣಯ ಕೈಗೊಳ್ಳಬೇಕು. ಶಿಕ್ಷಕರಿಗೆ ಸಮವಸ್ತ್ರ ನಿಗದಿಪಡಿಸಬೇಕು, ಸಮವಸ್ತ್ರದಲ್ಲಿ ಗೌರವ ಭಾವನೆ ಹೆಚ್ಚಾಗಲಿದೆ. ಕೆಲ ಶಿಕ್ಷಕರು ಧರಿಸುವ ಬಟ್ಟೆಗಳನ್ನು ನೋಡಿದರೆ ಅವರನ್ನು ಗುರುತಿಸುವುದು ಕಷ್ಟವಾಗುತ್ತದೆ. ಶಿಕ್ಷಕರನ್ನು ವಿದ್ಯಾರ್ಥಿಗಳು ಅನುಕರಣೆ ಮಾಡುತ್ತಾರೆ ಅದರಿಂದ ತಮ್ಮ ವೃತ್ತಿಗೆ ತಕ್ಕಂತೆ ಬಟ್ಟೆಗಳನ್ನು ಧರಿಸಬೇಕೆಂದರು. ಶಿಕ್ಷಕರ ಕೆಲಸ ಮಹತ್ವದ್ದಾಗಿದೆ, ಗುರುತರ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕೆಂದರು. ಶಿಕ್ಷಣ ಸಂಸ್ಥೆಗಳನ್ನು ಕಟ್ಟದವರು ಶಿಕ್ಷಕರೊಂದಿಗೆ ಗೌರವಯುತವಾಗಿ ವರ್ತಿಸಬೇಕು. ಶಿಕ್ಷರನ್ನು ವಿದ್ಯಾರ್ಥಿಗಳ ಎದಿರು ಏಕವಚನದಲ್ಲಿ ಸಂಬೋಧಿಸಬಾರದು ಎಂದರು.

ಶಿಕ್ಷಕರ ಜವಾಬ್ದಾರಿ ಹೆಚ್ಚಿರುತ್ತದೆ ಅದನ್ನು ಅರಿತು ಕೆಲಸ ಮಾಡಬೇಕು. ಸಂಘಟನೆಗಳನ್ನು ಮಾಡಿಕೊಳ್ಳಿ ಆದರೆ ಕಲಿಸುವದಕ್ಕೆ ಹೆಚ್ಚು ಸಮಯ ನೀಡಬೇಕು. ರಾಜಕಾರಣ ಇದ್ದೇಇದೆ ಆದರೆ ದೇಶ ಕಟ್ಟುವ ಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ ಅದನ್ನು ಅರಿತು ಕೆಲಸ ಮಾಡಬೇಕೆಂದರು.

ಡಿಎಸ್ಪಿ ಶಾಂತವೀರ ಮಾತನಾಡಿ, ಮಕ್ಕಳಿಗೆ ಮನೆಯಲ್ಲಿ ಸರಿಯಾದ ಸಂಸ್ಕಾರ ಕೊಡಬೇಕು. ಮಕ್ಕಳಿಗೆ ಸರಿಯಾದ ಶಿಕ್ಷಣದ ಜತೆಗೆ ಸಂಸ್ಕಾರವು ಅವಶ್ಯವೆಂದರು. ಶಿಕ್ಷಕರಾಗಿಯೇ ತಮ್ಮ ವೃತ್ತಿ ಜೀವನ ಪ್ರಾರಂಭಿಸಿದ್ದಾಗಿ ತಿಳಿದ ಅವರು, ಗುರುವಿಗೆ ಸಾವಿಲ್ಲ ಗುರುಗಳು ಮನುಷ್ಯನನ್ನು ಜೀವನದ ನಾಲ್ಕು ಹಂತಗಳಲ್ಲಿ ಮಾರ್ಗದರ್ಶನ ಮಾಡಿ ಮುನ್ನಡೆಸುತ್ತಾರೆ ಎಂದರು.

ಬಿಇಓ ಅಶೋಕ ಬಸಣ್ಣವರ, ತಾಪಂ ಸಿಇಓ ಸಂಜೀವ ಜುನ್ನೂರ, ಅಥಣಿ ತಾಲೂಕು ಮೋಟಗಿ ಮಠದ ಪ್ರಭು ಚೆನ್ನಬಸವ ಮಹಾಸ್ವಾಮಿಗಳು ಮಾತನಾಡಿದರು. ವೇದಿಕೆಯಲ್ಲಿ ನಗರಸಭೆ ಅಧ್ಯಕ್ಷ ಪರಮಾನಂದ ಗೌರೋಜಿ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಅನ್ವರ ಮೋಮಿನ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ತಹಸೀಲ್ದಾರ ಸದಾಶಿವ ಮಕ್ಕೊಜಿ, ಸಿ.ಎಸ್.ಕಲ್ಯಾಣಿ, ಪಂಚಾಕ್ಷರಿ ನಂದೇಶ, ಕಾಡು ಕೋಬುರ, ರಮೇಶ ಅವಟಿ ಸಹಿತ ಹಲವರು ಇದ್ದರು. ಇದೇ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು.

## ಕಡಪಟ್ಟಿಯಲ್ಲಿ ಭಕ್ತರಿಂದ ಸಂಭ್ರಮದಿಂದ ರದ್ದೂರಿ ರಥೋತ್ಸವ



**ಜಮಖಂಡಿ :** ತಾಲೂಕಿನ ಕಡಪಟ್ಟಿ ಗ್ರಾಮದ ಪವಾಡ ಬಸವೇಶ್ವರ ಮತ್ತು ಸಂಗಮೇಶ್ವರ ದೇವಸ್ಥಾನದ ಜಾತ್ರೆ ನಿಮಿತ್ತ ಸಾವಿರಾರು ಸದ್ಭಕ್ತರ ಘೋಷಣೆಗಳೊಂದಿಗೆ ಸಂಭ್ರಮದಿಂದ ರಥೋತ್ಸವ ಜರುಗಿತು.

# ಪ್ರತಿ ವರ್ಷದಂತೆ ಈ ವರ್ಷವೂ ಆರ್ಥಿಕ ಸಹಾಯ: ಶಾಸಕ ಗುಡಗುಂಟಿ



**ಜಮಖಂಡಿ :** ಸಾರ್ವಜನಿಕ ಗಣೇಶ ಉತ್ಸವಕ್ಕೆ ಪ್ರತಿವರ್ಷದಂತೆ ಈ ವರ್ಷವು ಆರ್ಥಿಕ ಸಹಾಯ ನೀಡುವುದಾಗಿ ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಸಾಕ್ಷಾತ್ಕಾರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಜಮಖಂಡಿ ನಗರ ಪ್ರದೇಶದಲ್ಲಿ ಪ್ರತಿಷ್ಠಾಪನೆಯಾಗುವ ಸಾರ್ವಜನಿಕ ಗಣಪತಿಗಳಿಗೆ ತಲಾ 5 ಸಾವಿರ ಮತ್ತು ಗ್ರಾಮೀಣ ಪ್ರದೇಶದ ಗಣಪತಿಗಳಿಗೆ ತಲಾ 25 ಕೆಜಿ ಸಕ್ಕರೆ ಅಥವಾ ಅಕ್ಕಿಯನ್ನು ವಿತರಿಸಲಾಗುವದು ಎಂದರು.

ಸ್ವಚ್ಛ ಮತ್ತು ಸ್ಥಳಾವಕಾಶವಿರುವಲ್ಲಿ ಮಾತ್ರ ಪ್ರಸಾದದ ವ್ಯವಸ್ಥೆ ಮಾಡುವಂತೆ ಗಣೇಶೋತ್ಸವ ಸಮೀತಿಗಳಿಗೆ ಮನವಿ ಮಾಡಿದ ಅವರು ರಸ್ತೆಗಳಲ್ಲಿ ಮತ್ತು ಕಾಲುವೆ ಪಕ್ಕದಲ್ಲಿ ದೇವರ ಪ್ರಸಾದ ಮಾಡುವುದು ಬೇಡ ಅದರ ಬದಲಾಗಿ ಪ್ರತಿಭಾನ್ವಿತರಿಗೆ ಪ್ರೋತ್ಸಾಹಿಸುವ ಕೆಲಸ ಮಾಡಬೇಕು.

ವಯೋವೃದ್ಧರಿಗೆ ಮತ್ತು ಕೈಲಾಗದವರಿಗೆ, ಬಡವರಿಗೆ ಗಣೇಶ ಉತ್ಸವ ಸಮೀತಿಯಿಂದ ಸಹಾಯ ಮಾಡಬೇಕು ಎಂದರು.

ಗಣೇಶ ಉತ್ಸವ ಮಹಾಮಂಡಲದ ಅಧ್ಯಕ್ಷ ಸುನೀಲ ಬೋವಿ ಮಾತನಾಡಿ, ಅನ್ನಪ್ರಸಾದ ಮಾಡುವ ಸಮಿತಿ ಒಂದೇ ದಿನ ಎಲ್ಲ ಕಡೆಗಳಲ್ಲಿ ಪ್ರಸಾದ ಮಾಡದೇ ಒಂದೊಂದು ದಿನ ಒಂದು ಕಡೆ ಮಾತ್ರ ವ್ಯವಸ್ಥೆ ಮಾಡಬೇಕು. ಎಲ್ಲ ಸಮೀತಿಗಳಿಗೆ ಪರವಾನಿಗೆ ಕೊಡಿಸಲು ಮಹಾಮಂಡಲದಿಂದ ವ್ಯವಸ್ಥೆ ಮಾಡಲಾಗಿದೆ. ರಕ್ತದಾನ ಶಿಬಿರ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಸುಂದರ ಅಲಂಕೃತ ಗಣಪತಿಗಳಿಗೆ ವಿಶೇಷ ಬಹುಮಾನ ನೀಡಲಾಗುವದು. ಮನೆಗಳಿಗೆ ಭೇಟಿ ಕಾರ್ಯಕ್ರಮವಿದ್ದು ಅಲಂಕಾರಿಕ ಗಣೇಶಕ್ಕೆ ಬಹುಮಾನ ನೀಡಲಾಗುವದು ಎಂದರು. ತಮ್ಮ ಅಲಂಕಾರದ ಚಿತ್ರ ಮತ್ತು ವಿಡಿಯೋಗಳನ್ನು 8431765519, 7019665733,ಅಥವಾ 7019690184 ಸಂಖ್ಯೆಗೆ ಕಳುಹಿಸಬೇಕೆಂದರು.

ಬಿಜೆಪಿ ನಗರ ಅಧ್ಯಕ್ಷ ಅಜಯ ಕಡಪಟ್ಟಿ ಮಾತನಾಡಿ, ಶಾಸಕರು ಪ್ರತಿವರ್ಷದಂತೆ ಆರ್ಥಿಕ ಸಹಾಯ ನಿಡಲಿದ್ದು ಸಾರ್ವಜನಿಕ ಗಣೇಶ ಉತ್ಸವ ಸಮೀತಿಯವರು ಕಚೇರಿ ಸಮಯದಲ್ಲಿ ಭೇಟಿಯಾಗಿ ಆರ್ಥಿಕ ಸಹಾಯ ಪಡಯ ಬೇಕು. ನಗರದ ಎಲ್ಲ ಮಂಡಳೀಯವರು ಫಾರ್ಮಗಳನ್ನು ಪಡೆದು ಭರ್ತಿ ಮಾಡಿ ಕೊಡಬೇಕೆಂದರು. ನಗರದಲ್ಲಿ 108 ಮತ್ತು ಗ್ರಾಮೀಣದಲ್ಲಿ 240ಕ್ಕೂ ಹೆಚ್ಚು ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಯಾಗಲಿದೆ ಎಂದರು.

ವೇದಿಕೆಯಲ್ಲಿ ಯೋಗಪ್ಪ ಸವದಿ, ಡಾ.ರಾಕೇಶ ಲಾಡ, ಗಣೇಶ ಶಿರಗಣ್ಣವರ, ಸಚೀನ ಪಟ್ಟಣಶೆಟ್ಟಿ, ಗಂಗಾಧರ, ಪ್ರದೀಪ ಮೆಟಗುಡ್ಡ, ಶ್ರೀಶೈಲ ರಾಂಬಳ್ಳಿ, ಮಾದುಗೌಡ ಪಾಟೀಲ, ಶ್ರೀಧರ ಕಂಬಿ ಸಹಿತ ಹಲವರು ಇದ್ದರು.

## ಸಂವಿಧಾನ ಪೀಠಿಕೆ ಹಾಗೂ ಆಶಯಗಳ ಕುರಿತು ವಿಶೇಷ ಉಪನ್ಯಾಸ



**ಬಾಗಲಕೋಟೆ**ಪ್ರತಿಯೊಬ್ಬರಿಗೂಸಂವಿಧಾನದಪೀಠಿ–ಕೆಯ ಕುರಿತು ತಿಳುವಳಿಕೆ ಇರುವುದು ಅಗತ್ಯವಾಗಿದೆ ಎಂದು ಭಗವತಿ ಸರಕಾರಿ ಪದವಿಪೂರ್ವ ಕಾಲೇಜಿನ ಪ್ರಭಾರಿ ಪ್ರಾಚಾರ್ಯರಾದ ಬಿ. ವೈ. ಕೆಳಗಿನಮನಿ ಅವರು ತಿಳಿಸಿದರು. ಕಮತಗಿ ಪಟ್ಟಣದ ಶ್ರೀ ಹುಚ್ಚೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕದಡಿಯಲ್ಲಿ ಸಂವಿಧಾನದ ಪೀಠಿಕೆ ಹಾಗೂ ಮೌಲ್ಯಗಳ ಕುರಿತು ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಸಂವಿಧಾನದ ಜಾ–ರಿಯಾದ ನಂತರ ಎಲ್ಲರಿಗೂ ಘನತೆ ಹಾಗೂ ವ್ಯಕ್ತಿತ್ವ ತಂದು ಕೊಟ್ಟಿತು.

ಅದಕ್ಕಾಗಿ ಸಂವಿಧಾನವು ನಮ್ಮದು ಎನ್ನುವ ಮನೋಭಾವವನ್ನು ನಾವೆಲ್ಲರೂ ಹೊಂದಬೇಕು. ಇದರ ವೈಶಿಷ್ಟಗಳು ನಮಗೆಲ್ಲ ಗೌರವ ತಂದು ಕೊಟ್ಟಿದ್ದಕ್ಕಾಗಿ ಈ ಸಂವಿಧಾನದ ಪ್ರಣಾಳಿಕೆಯನ್ನು ಭಾರತದ ಪ್ರತಿಯೊಬ್ಬರು ಅರಿತುಕೊಳ್ಳಬೇಕೆಂದರು. ಸಂವಿಧಾನ ನಮಗೆ ಗೌರವ ಘನತೆ, ಸ್ಥಾನಮಾನ, ಅಧಿಕಾರವನ್ನು ಕೊಟ್ಟಿದೆ.

ಈ ಸಂವಿಧಾನದಿಂದ ಮೂಲಭೂತ ತತ್ವಗಳಾದ ಸಮಾನತೆ, ಸ್ವಾತಂತ್ರ್ಯ ಮತ್ತು ಅನುಕಂಪ ಇವು ಮೂರುಪೀಠಿಕೆಯಲ್ಲಿಇವೆ.ಈಮೂರುತತ್ವಗಳುನಮ್ಮ ಬದುಕನ್ನು ರೂಪಿಸಿ ಕೊಟ್ಟಿದೆ. ಸಂವಿಧಾನ ರಚನೆಗೂ ಮುನ್ನ ಜಗತ್ತಿನ ಶ್ರೇಷ್ಠ ಸಂವಿಧಾನದ ಅಧ್ಯಯನ ಮಾಡಿ ನಮ್ಮ ಸಂವಿಧಾನವನ್ನು ರಚಿಸಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಎಸ್.ವಿ. ಬಾಗೇವಾಡಿ ಮಾತನಾಡಿ ಸಂವಿಧಾನವು ಮೂಲಭೂತ ಕಾನೂನುವಾಗಿದೆ. ಸಂವಿಧಾನದಲ್ಲಿ ಅಳವಡಿಸಿರುವ ತತ್ವಗಳು ಉದ್ದೇಶಗಳು ರಾಷ್ಟ್ರ ಮತ್ತು ನಾಗರಿಕರಿಗೆ ಮಾರ್ಗದರ್ಶನ ನೀಡುತ್ತವೆ ಎಂದು ತಿಳಿಸಿದರು. ರಾಷ್ಟ್ರೀಯ ಸೇವಾ ಯೋಜನೆಯ ಮುಖ್ಯಸ್ಥರಾದ ಎಸ್.ಕೆ. ಮುತ್ತಲಗೇರಿ ಅವರು ಪ್ರಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಸವರಾಜ ಬೀರಕಬ್ಬಿ, ಸುರೇಶ ಭಜಂತ್ರಿ, ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಹಾಜ–ರಿದ್ದರು. ಎಂ.ಎಸ್. ಶೆಟ್ಟರ ಅವರು ನಿರೂಪಿಸಿದರು. ಎನ್.ಪಿ. ಹುಲಮನಿಗೌಡರ ವಂದಿಸಿದರು.

# ಡ್ರೋಣದಿಂದ ನ್ಯಾನೋ ಯೂರಿಯಾ ಸಿಂಪರಣೆ ಪ್ರಾತ್ಯಕ್ಷಿಕೆ



**ಜಮಖಂಡಿ :** ತಾಲೂಕಿನ ಚಿಕ್ಕಲಕಿ ಗ್ರಾಮದ ಪ್ರಗತಿಪರರೈತ ಪಾಂಡು ಕೆರಬಾ ಜಮೀನಿನಲ್ಲಿ ಬೆಳೆದ ತೊಗರಿ ಬೆಳೆಗೆ ಡ್ರೋಣ್ ಮೂಲಕ ಇಫ್ಕೋ ಸಂಸ್ಥೆ ನ್ಯಾನೋ ಯೂರಿಯಾ ಸಿಂಪರಣೆ ಪ್ರಾತ್ಯಕ್ಷಿಕೆಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಶಶಿಧರ ಕುರೇರ ಚಾಲನೆ ನೀಡಿದರು.

ತೊಗರಿ ಬೆಳೆಯಲ್ಲಿ ನ್ಯಾನೋ ಯೂರಿಯಾ ಸಿಂಪರಣೆಯಿಂದಾಗುವ ಉಪಯೋಗದ ಕುರಿತು ಮಾಹಿತಿ ಪಡೆದರು. ಅಲ್ಲದೇ ತೊಗರಿ ಬೆಳೆಯಲ್ಲಿ ಯಂತ್ರದ ಮೂಲಕ ಕುಡಿ ಚಿವುಟುವ ಪ್ರಾತ್ಯಕ್ಷಿಕೆಯನ್ನು ವೀಕ್ಷಿಸಿದರು.

ರೈತ ಪಾಂಡು ಮಾಡಿಕ ಅವರ ಸುಧಾರಿತ ಜಿ.ಆರ್.ಜಿ ತಳಿಯ ತೊಗರಿ ಬೆಳೆಯಲ್ಲಿ ಅಳವಡಿಸಿರುವ ಅಗಲಸಾಲು ಪದ್ಧತಿ ಮತ್ತು ಹನಿ ನೀರಾವರಿ ಪದ್ಧತಿ, ಮೆಕ್ಕೆಜೋಳ ವಿವಿಧ ತಳಿಗಳ ದ್ರಾಕ್ಷಿ ಬೆಳೆ, 3 ಎಕರೆ ಪ್ರದೇಶದಲ್ಲಿರುವ ಬೃಹತ್ ಕೃಷಿಹೊಂಡ, 25ಲಕ್ಷ ವೆಚ್ಚದ ಸ್ವಯಂಚಾಲಿತ ಪ್ರಚೋದಕ ಯಂತ್ರ, ದ್ರಾಕ್ಷಿ ಸಾರ್ಟಿಂಗ್ ಹಾಗೂ ಗ್ರೇಡಿಂಗ್ ಯಂತ್ರ, ವಿವಿಧ ಆಧುನಿಕ ಕೃಷಿ ಯಂತ್ರೋಪಕರಣಗಳ ಕಾರ್ಯವೈಖರಿ ವಿಧಾನಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ತೊದಲಬಾಗಿಯ ಮಲ್ಲನಗೌಡ ರುದ್ರಗೌಡರ ಒಣದ್ರಾಕ್ಷಿ ಸಂಸ್ಕರಣ ಘಟಕ, ಶೀತಲ ಘಟಕ ಹಾಗೂ ವೈನ್ ಘಟಕದ ವೀಕ್ಷಿಸಿದ ನಂತರ ದ್ರಾಕ್ಷಿ ಶೇಖರಣೆ, ಸಂಸ್ಕರಣೆ, ಆನಲೈನ್ ಮಾರುಕಟ್ಟೆ ಕುರಿತು ಮಾಹಿತಿ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಉಪಕೃಷಿ ನಿರ್ದೇಶಕ ಕೆ.ಎಸ್. ಅಗಸನಾಳ, ಸಹಾಯಕ ಕೃಷಿ ನಿರ್ದೇಶಕರಾದ ಎಂ.ಆರ್.ನಾಗೂರ, ಸಿದ್ದಪ್ಪ ಪಟ್ಟಿಹಾಳ, ಸಹಾಯಕ ತೋಟಗಾರಿಕಾ ನಿರ್ದೇಶಕ ಪ್ರವೀಣ ಗಾಣಿಗೇರ, ಕೃಷಿ ಅಧಿಕಾರಿ ರವೀಂದ್ರ ತುಳಸಿಗೇರಿ, ಆತ್ಮಯೋಜನಾಧಿಕಾರಿ ಕೆ.ಎ.ಜಮಖಂಡಿ, ಪ್ರಗತಿಪರ ರೈತರಾದ ಸಿದ್ದುಬಾ ಮಾಡಿಕ, ಮಹೇಶ ಕುಲಕರ್ಣಿ, ಜ್ಯೋತಿಬಾ ಮಾಡಿಕ ಸಹಿತ ಹಲವರು ಇದ್ದರು.

## ಪುರಾಣ ಮಂಗಲ ಕಾರ್ಯಕ್ರಮ

**ಹಾರೂಗೇರಿ :** ಸ್ಥಳೀಯ ಶ್ರೀ ಚನ್ನವೃಷಭೇಂದ್ರ ದೇವರ ಕೊಂಡಜ್ಜನವರ ಲೀಲಾಮಠದಲ್ಲಿ ಪೂಜ್ಯ ಶ್ರೀ ಶಿವಾನಂದ ಪರಮಹಂಸರ 48 ನೇ ಪುಣ್ಯಸ್ಮರಣೋತ್ಸವ ಹಾಗೂ ಶ್ರಾವಣ ಮಾಸದ ಪುರಾಣ ಮಂಗಲೋತ್ಸವ ಸಮಾರಂಭ ಯಶಸ್ವಿಯಾಗಿ ಜರುಗಿತು. ಪುರಾಣವನ್ನು ಯಶಸ್ವಿಯಾಗಿ ಮುಕ್ತಾಯಗೊಳಿಸಿದ ಅಪ್ಪಾಸಾಬ ಕುಲಕರ್ಣಿ ಅವರನ್ನು ಸದ್ಭಕ್ತ ಮಂಡಳಿ ಸತ್ಕರಿಸಿದರು. ಈ ಸಂದರ್ಭದಲ್ಲಿ ಹಿರಿಯರಾದ ಬಾಬು ಹಳ್ಳೂರ, ವಿಠ್ಠಲ ಬಂತಿ, ಮಹಾದೇವ ಲುಡಬುಡೆ, ಬಾಬು ಪರಮಗೌಡರ, ನೇಮಿನಾಥ ಕೊತ್ತಲಗಿ, ವಿಜಯ ಬಂತಿ, ರಾಘು ಕುಲಕರ್ಣಿ, ಜಿನ್ನಪ್ಪ ಬೆಳಗಲಿ, ಯಮನಪ್ಪ ಬಂಡಗರ, ಸುರೇಶ ಧರ್ಮಟ್ಟಿ, ರಾಜು ಕರ್ಣವಾಡಿ, ಮಾರುತಿ ಹಾಡಕಾರ, ಭಗವಂತ ಸೂರಣ್ಣವರ, ಅಣ್ಣಪ್ಪ ಹಿಡಕಲ್, ಸಿದ್ದಪ್ಪ ಹಾಡಕಾರ, ಕೆಂಚಪ್ಪ ಹಾಡಕಾರ,ಲಾಲ್ ಸಾಬ ಜಮಾದಾರ ಮುಂತಾದವರು ಉಪಸ್ಥಿತರಿದ್ದರು.

## ಗಣೇಶ ಮೆರವಣಿಗೆಗೆ ಡಿಜೆ ಬದಲಾಗಿ ಕಲಾತಂಡ ಬಳಿಸಿ

**ಜಮಖಂಡಿ :** ಗಣೇಶ ಉತ್ಸವದ ಮೆರವಣಿಗೆಯಲ್ಲಿ ಡಿಜೆ ಬಳಕೆ ಬದಲು ಕಲಾತಂಡಗಳನ್ನು ಬಳಸುವ ಮೂಲಕ ಕಲಾತಂಡದವರನ್ನು ಪ್ರೊತ್ಸಾಹಿಸಿ ಎಂದು ಡಿ.ವೈ.ಎಸ್.ಪಿ. ಈ.ಶಾಂತವೀರ ಹೇಳಿದರು.

ಸ್ಥಳೀಯನಗರಠಾಣೆಆವರಣದಲ್ಲಿಗೌರಿಗಣೇಶಹಬ್ಬದ ಶಾಂತಿಪಾಲನಾ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಡೊಳ್ಳು ಕುಣಿತ, ಕರಡಿ ಮಜಲು, ಜಾಂಝು ಪಥಕ್, ಮುಂತಾದ ಕಲಾ ತಂಡಗಳನ್ನು ಗಣೇಶ ಮೆರವಣಿಗೆಯಲ್ಲಿ ಬಳಸುವುದರಿಂದ ಕಲಾತಂಡಗಳನ್ನು ಪ್ರೊತ್ಸಾಹಿಸಿದಂತಾಗುತ್ತದೆ. ಕಲಾ ತಂಡದವರಿಗೆ ಸಂಭಾವನೆ ಲಭಿಸಲಿದೆ ಎಂದರು.

ಡಿಜೆ ಬಳಕೆಯಿಂದ ಹೃದಯ ಸಂಬಂಧಿ ರೋಗಿಗಳು ಮತ್ತು ಸಣ್ಣಮಕ್ಕಳಿಗೆ ತೊಂದರೆಯಾಗುತ್ತದೆ. ಸರ್ಕಾರ ನಿಗದಿ ಪಡಿಸಿದ ಧ್ವನಿವರ್ಧಕಗಳನ್ನು ಬಳಸಬೇಕು, ಸಾರ್ವಜನಿಕ ಗಣೇಶ ಉತ್ಸವದ ಪ್ರತಿಯೊಂದು ಮಂಡಳಿಯವರು ತಮ್ಮ ಸಮೀತಿ ಯುವಕರ ಹೆಸರುಗಳನ್ನು ಕೊಡಿ ಅವರಿಗೆ ತರಬೇತಿ ನೀಡಿ ಪೋಲಿಸ್ ಮಿತ್ರ ಕಾರ್ಡಗಳನ್ನು ನೀಡಲಾಗುವುದು. ಗಣೇಶ ವಿಸರ್ಜನೆ ಸಮಯವನ್ನು ಆದಷ್ಟು ಬೇಗನೆ ಪ್ರಾರಂಭಿಸಬೇಕು. ಪೊಲೀಸ್ ಸಿಬ್ಬಂದಿ ಹಬ್ಬ ಹರಿದಿನ ಬಿಟ್ಟು ತಮ್ಮ ಸುರಕ್ಷತೆಗೆ ಕೆಲಸ ಮಾಡುತ್ತಿರುವದನ್ನು ಗಮನಿಸಬೇಕು ಎಂದರು.

ಅಹಿತಕರ ಘಟನೆಗಳು ನಡೆಯದಂತೆ ಇಲಾಖೆಯೊಂದಿಗೆ ಸಹಕರಿಸಿ ಯಾವುದೇ ಮಾಹಿತಿ ಸಿಕ್ಕರೆ ಕೂಡಲೇ ಅಧಿಕಾರಿಗಳಿಗೆ ಮಾಹಿತಿ ನೀಡಿದಲ್ಲಿ ಕ್ರಮ ಜರುಗಿಸಲಾಗುವುದು. ಎಲ್ಲ ಕಡೆಗಳಲ್ಲಿ ಹಬ್ಬ ಇರುವುದರಿಂದ ಸಿಬ್ಬಂದಿ ಕರ್ತವ್ಯಕ್ಕೆ ನಿಯೋಜಿಸಲಾಗಿರುತ್ತದೆ. ಜತೆಗೆ ಗಣೇಶ ಉತ್ಸವ ಸಮೀತಿಯವರು ಇರಬೇಕು. ವದಂತಿಗಳು ಹಬ್ಬದಂತೆ ಕ್ರಮ ಜರುಗಿಸಿ, ಯಾವುದೇ ವದಂತಿಗಳಿಗೆ ಕಿವಿ ಕೊಡಬಾರದು ಎಂದರು.

ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಮಾತನಾಡಿ, ಸಡಗರ ಸಂಭ್ರಮದಿಂದ ಹಬ್ಬವನ್ನು ಆಚರಿಸಿದಲ್ಲಿ ಇಲಾಖೆ ಎಲ್ಲ ರೀತಿ ಸಹಕಾರ ನೀಡಲಿದೆ ಎಂದರು.

ಸಿಪಿಐಮಲ್ಲಪ್ಪಮಡ್ಡಿಮಾತನಾಡಿ,ಮೆರವಣಿಗೆಯನ್ನು ಬೇಗನೇ ಪ್ರಾರಂಭಿಸಿದರೆ ಎಲ್ಲರೂ ನೋಡಲು ಬರುತ್ತಾರೆ ಮಹಿಳೆಯರು ಮತ್ತು ಮಕ್ಕಳು ಮೆರವಣಿಗೆ ನೋಡಲು ಬರುವಂತೆ ಕ್ರಮ ಜರುಗಿಸಿ ತಡರಾತ್ರಿವರೆಗೆ ಕಾಯಿಸಬೇಡಿಎಂದರು.ಅಗ್ನಿಶಾಮಕದಳದಅಧಿಕಾರಿ ರಾಜುತಳವಾರಮಾತನಾಡಿದರು.ಮಹಾಮಂಡಲದ ಅಧ್ಯಕ್ಷಸುನೀಲಭೋವಿ,ಡಾ.ರಾಕೇಶ ಲಾಡ, ಶ್ರೀಶೈಲ ಗುಂಡಗಿ, ರಾಘು ಲಗಳಿ, ಶ್ರೀಧರ ಕೊಣ್ಣೂರ, ಪ್ರವೀಣ ಮೆಟಗುಡ ಸಹಿತ ನಗರ ಮತ್ತು ಗ್ರಾಮೀಣಭಾಗದ ಹಿರಿಯರು, ಯುವಕರು ಇದ್ದರು.

# ಜೀವನಕ್ಕೆ ಉಪಯೋಗವಾಗುವ ಶಿಕ್ಷಣ ಬೇಕು




**ಬಾಗಲಕೋಟೆ :** ಶಾಲೆಯಲ್ಲಿ ನೀಡುವ ಶಿಕ್ಷಣ ವಿದ್ಯಾರ್ಥಿಗಳ ಜೀವನಕ್ಕೆ ಉಪಯೋಗವಾಗುವಂತಿರಬೇಕು. ಅಲ್ಲಿ ಕಲಿತ ವಿದ್ಯೆ ಬದುಕು ಕಟ್ಟಿಕೊಳ್ಳಲು ನೆರವಾಗುವಂತಿರಬೇಕುಎಂದುರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು. ನಗರದ ವಿದ್ಯಾ ಪ್ರಸಾರಕ ಮಂಡಳಗುರುವಾರಸಂಜೆಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿತ್ಯ ಜೀವನದಲ್ಲಿ ಉಪಯೋಗ ಹಾಗೂ ಅನ್ವಯವಾಗಬಲ್ಲ ಶಿಕ್ಷಣದ ಅವಶ್ಯಕತೆ ಇದೆ. ಅದು ವಿದ್ಯಾರ್ಥಿಗಳ ಭವಿಷ್ಯದಲ್ಲಿನ ಉಪಜೀವನಕ್ಕೆ ಸಹಕಾರಿಯಾಗುತ್ತದೆ ಎಂದರು.

ಶಿಕ್ಷಕ ವೃತ್ತಿ ಕೇವಲ ವೃತ್ತಿಯಾಗದೇ ಸೇವೆಯಾಗಬೇಕು. ಶಿಕ್ಷಣದಲ್ಲಿ ಹಿಂದೆ ಬೀಳುವ ವಿದ್ಯಾರ್ಥಿಗಳನ್ನು ಸೂಕ್ತ ಮಾರ್ಗದರ್ಶನ ನೀಡಿ ಮೇಲೆಕ್ಕೆತ್ತುವ ಪ್ರಯತ್ನವನ್ನು ಶಿಕ್ಷಕರು ಮಾಡಬೇಕು. ವಿದ್ಯಾರ್ಥಿಗಳ ಜೀವನವನ್ನು ಬದಲಾಯಿಸುವ ಶಕ್ತಿ ಶಿಕ್ಷಕರಿಗಿದೆ ಎಂದರು. ಸಕ್ರಿ ಪ್ರೌಢ ಶಾಲೆಯ ಹಳೆಯ ವಿದ್ಯಾರ್ಥಿಯಾಗಿರುವ ಭಾಂಡಗೆ ಅವರು ತಮ್ಮ ಶಾಲಾ ದಿನ ಹಾಗೂ ಸಮರ್ಪಣಾ ಭಾವದ ಶಿಕ್ಷಕರ ಬೋಧನಾ ವೈಖರಿಯನ್ನು ನೆನಪಿಸಿಕೊಳ್ಳುತ್ತ, ಈ ಶಾಲೆ ಗುಣಮಟ್ಟದ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಿಗೆ ಸಂಸ್ಕಾರವನ್ನೂ ನೀಡಿದೆ ಎಂದರು. ಈ ಸಂಸ್ಥೆಯ ಅಭಿವೃದ್ಧಿಗೆ ತಾವು ಅವಶ್ಯಕ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದರು. ಗೌರವ ಕಾರ್ಯದರ್ಶಿ ಡಾ. ಗಿರೀಶ ಮಸೂರಕರ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ವ್ಹಿ. ವಾಯ್ ಕವತೇಕರ ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆಯ ವಿವಿಧ ಅಂಗ ಸಂಸ್ಥೆಗಳ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಎಂ.ಎನ್.ಪುರಾಣಿಕ, ಎಸ್. ಆರ್.ಮಿರ್ಜಿ, ಡಾ.ಎಸ್.ಬಿ.ಪರ್ವತೀಕರ, ಎಚ್.ಜಿ.ಜೋಶಿ ಹಾಗೂ ಎಸ್.ಗುರುರಾಜ ಸನ್ಮಾನಕ್ಕೆ ಪ್ರತಿಯಾಗಿ ಮಾತನಾಡಿದರು. ಕಾರ್ಯಾಧ್ಯಕ್ಷೆಶ್ರೀಮತಿಶ್ರೀಲತಾಹೆರಂಜಲ್ ಸ್ವಾಗತಿಸಿದರು. ಪ್ರಾಚಾರ್ಯ ಶ್ರೀನಿವಾಸ ನರಗುಂದ ಪರಿಚಯಿಸಿದರು. ಡಾ.ಉಮೇಶ ತಿಮ್ಮಾಪೂರ ನಿರೂಪಿಸಿದರು. ಡಾ.ಪಿ.ಆರ್. ಜೋಶಿ ವಂದಿಸಿದರು. ಸದಸ್ಯರಾದ ವಿಜಯಾನಂದ ಬುರ್ಲಿ, ಡಾ. ಜೆ.ಎಸ್. ದೇಶಪಾಂಡೆ, ಎಸ್.ಕೆ.ಕುಲಕರ್ಣಿ, ಡಾ. ಎಮ್.ಜಿ ದೀಕ್ಷಿತ್, ಸುಧೀರ ದೇವದಾಸ, ಡಾ.ಆರ್.ವ್ಹಿ ಜೋಶಿ ಮತ್ತಿತರರು ಇದ್ದರು.

# ರಸ್ತೆ ದುರಸ್ತಿಗೆ ಆಗ್ರಹಿಸಿ ಪ್ರತಿಭಟನೆ



**ಲಕ್ಷ್ಮೇಶ್ವರ :** ತಾಲೂಕಿನ ದೊಡ್ಡೂರು ಗ್ರಾಮದ ರೈತರು ಕೃಷಿ ಕೂಲಿ ಕಾರ್ಮಿಕರು ಮತ್ತು ಗ್ರಾಮಸ್ಥರು ನಿನ್ನೆ ದೊಡ್ಡೂರಿನಿಂದ ಹೆಸರೂರಿಗೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೂಡಲೇ ದುರಸ್ತಿ ಮಾಡುವಂತೆ ಆಗ್ರಹಿಸಿ ಗ್ರಾಮ ಪಂಚಾಯಿತಿಯ ಮುಂದೆ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಮುಖಂಡ ಅಮರಪ್ಪ ಗುಡಗುಂಟಿ ಅವರು ದೊಡ್ಡೂರು ಹೆಸರೂ ರು ಮಧ್ಯದ ಸುಮಾರು ಒಂದು ಕಿಲೋಮೀಟರ್ ರಸ್ತೆ, ಸಂಪೂರ್ಣ ಗುಂಡಿಯಿಂದ ತುಂಬಿಕೊಂಡಿದ್ದು ರೈತರ ಜಮೀನುಗಳು ಇಲ್ಲಿಯೇ ಇದ್ದು ಈಗ ಫಸಲು ಬಂದಿದ್ದರೂ ಅವುಗಳನ್ನು ಜಮೀನುಗಳಿಂದ ಮನೆಗೆ ತರಲು ಆಗುತ್ತಿಲ್ಲ ಆದ್ದರಿಂದ ಯಾವುದಾದರೂ ಯೋಜನೆಯಲ್ಲಿ ಅನುದಾನ ಕಲ್ಪಿಸಿ ರಸ್ತೆ ನಿರ್ಮಾಣ ಮಾಡಲೇಬೇಕು ಎಂದು ಅಧಿಕಾರಿಗಳಿಗೆ ಒತ್ತಾಯಿಸಿದರು.

ಆಗ ಸ್ಥಳದಲ್ಲಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಲ್ಲಪ್ಪ ತೋಟದವರು ಈಗಾಗಲೇ ಈ ರಸ್ತೆಯ ಕುರಿತು ಸರ್ಕಾರದ ಗಮನಕ್ಕೂ ಸಹ ತರಲಾಗಿದೆ ಮತ್ತು ತಾಲೂಕಾ ಪಂಚಾಯತಿಯ ಕ್ರಿಯಾಯೋಜನೆಯಲ್ಲಿ 10 ಲಕ್ಷ ರೂಗಳ ಅನುದಾನವನ್ನು ಕಲ್ಪಿಸಿ ಅನುಮೋದನೆಗಾಗಿ ಕಳಿಸಲಾಗಿದೆ ಅನುದಾನ ಲಭ್ಯವಾದ ಕೂಡಲೇ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದರು.

ಆದರೆ ರೈತರು ಸ್ಥಳೀಯವಾಗಿ ವಿವಿಧ ಯೋಜನೆಗಳಲ್ಲಿ ಲಭ್ಯವಿರುವ ಅನುದಾನವನ್ನು ಉಪಯೋಗ ಮಾಡಲೇಬೇಕು ಎಂದು ಬಿಗಿಪಟ್ಟು ಹಿಡಿದರು ಆಗ ಪಿಡಿಓ ಬಳಕೆಯಾಗದೇ ಇರುವ ಅನುದಾನವನ್ನು ಸಭೆಯಲ್ಲಿ ಅನುಮೋದನೆ ಪಡೆದು ಸಾಧ್ಯವಾದ ಮಟ್ಟಿಗೆ ಒದಗಿಸುವದಾಗಿ ಹೇಳಿದರು.

ಪ್ರತಿಭಟನೆಯಲ್ಲಿ ಮಹದೇವಪ್ಪಾರಗಟ್ಟಿ ಎಲ್ಲಪ್ಪ ತೋಟದ ಬಸಪ್ಪ ಬಾಗಲದ ಬಸಪ್ಪ ಡೊಳ್ಳಿನ ಭೀಮನಗೌಡ್ರು ಇಳಿಗೇರ ಬಸವರಾಜ್ ಮಕರಬಿ ಬಸಪ್ಪ ಬಾಗಲದ ಬಸಪ್ಪ ಡೊಳ್ಳಿನ ಗಜೇಂದ್ರ ಮಕರಬಿ ರಾಮಣ್ಣ ಹರವಿ ರಾಮಣ್ಣ ಸ್ವಾದಿ ನಿಂಗಪ್ಪ ಕಳ್ಳಳ್ಳಿ ಪಕ್ಕಿರೇಶ ಮತ್ತೂರ ಗಣೇಶ ಲಮಾಣಿ ಸೇರಿದಂತೆ ಗ್ರಾಮ ಪಂಚಾಯತಿ ಸದಸ್ಯರು ಇದ್ದರು.

ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಅಧಿಕಾರಿಗಳ ಆಶ್ವಾಸನೆ ನೀಡಿದ ಹಿನ್ನೆಲೆಯಲ್ಲಿ ರೈತರು ಪ್ರತಿಭಟನೆಯನ್ನು ಕೈಬಿಟ್ಟರು.

# ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲಿ



**ಧಾರವಾಡ :** ಸರಕಾರ ಅನುಷ್ಠಾನ ಮಾಡಿರುವ 5 ಗ್ಯಾರಂಟಿ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಸಬೇಕೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್.ಪಾಟೀಲ ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾದ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಸಾಂಸ್ಥಿಕ ಕಾರ್ಯ ವಿಧಾನಗಳು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸುವಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಮಾತನಾಡಿದರು.

ಹಳ್ಳಿಗಳಿಗೆ ಸರಿಯಾದ ಬಸ್ ವ್ಯವಸ್ಥೆ ಕಲ್ಪಿಸಿ ಶಾಲಾ ಮಕ್ಕಳಿಗೆ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಅಂತರ ರಾಜ್ಯ ಬಸ್‌ಗಳನ್ನು ಕಡಿಮೆ ಮಾಡಿ, ಸ್ಥಳೀಯ ಹಾಗೂ ಹಳ್ಳಿಗಳಿಗೆ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡಿ, ಸಮಸ್ಯೆಗಳು ಆಗದಂತೆ ಸರಿಯಾದ ಕ್ರಮ ಕೈಗೊಳ್ಳಲು ಸಾರಿಗೆ ಅಧಿಕಾರಿಗಳಿಗೆ ಅವರು ಹೇಳಿದರು.

ಕಲಘಟಗಿ ತಾಲೂಕಿನ ದೇವಿಕೊಪ್ಪ ಹಾಗೂ ನವಲಗುಂದ ತಾಲೂಕಿನಲ್ಲಿ ವಿದ್ಯುತ್ ಹಳೆಯ ಕಂಬಗಳು ಹೆಚ್ಚಾಗಿ ಬಾಗಿರುವುದು ಹಾಗೂ ವಿದ್ಯುತ್ ಸರಬರಾಜು ಸರಿಯಾಗಿ ಪೂರೈಸುವಂತೆ ಇಲಾಖೆಯ ಅಧಿಕಾರಿಗಳಿಗೆ ಪರಿಶೀಲಿಸಲು ಅವರು ತಿಳಿಸಿದರು.

ಸರಿಯಾದ ಬೋರ್ಡ್ ವ್ಯವಸ್ಥೆ ಇಲ್ಲದಂತಹ ನ್ಯಾಯ ಬೆಲೆ ಅಂಗಡಿ ಗುರುತಿಸಿ, ತಕ್ಷಣವೇ ಬೋರ್ಡ್‌ಗಳನ್ನು ಹಾಕಿಸಬೇಕು. ಕುಂದಗೋಳ ತಾಲೂಕಿನ ನ್ಯಾಯಬೆಲೆ ಅಂಗಡಿಗಳಿಗೆ ಅಧಿಕಾರಿಗಳು ಭೇಟಿ ನೀಡಿ, ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸುವಂತೆ ಆಹಾರ ಮತ್ತು ನಾಗರಿಕ ಸೌಲಭ್ಯ ಇಲಾಖೆಯ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಹಳ್ಳಿಗಳಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ರೂ. 2,000 ಹಣವು ಸರಿಯಾಗಿ ಫಲಾನುಭವಿಗಳಿಗೆ ತಲುಪುತ್ತಿಲ್ಲವೆಂದು ದೂರುಗಳು ದಾಖಲಾಗುತ್ತಿದ್ದು, ಅಂತಹ ಸ್ಥಳಗಳಿಗೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ಮಾಡಿ, ವರದಿಯನ್ನು ನೀಡುವಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ತಿಳಿಸಿದರು.

ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಯಶಸ್ವಿಯಾಗಿ ಯೋಜನೆಗಳು ತಲುಪುವಂತೆ ಜಿಲ್ಲೆಯ ಹಾಗೂ ತಾಲೂಕಿನ ಎಲ್ಲಾ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಮತ್ತು ಗ್ಯಾರಂಟಿ ಯೋಜನೆಯ ಸಮಿತಿ ಸದಸ್ಯರು ತಾಲೂಕು ಮಟ್ಟದಲ್ಲಿ ಸಭೆಗಳನ್ನು ಜರುಗಿಸಿ, ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಿ ಸರ್ಕಾರದ ಯೋಜನೆಗಳನ್ನು ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ್ ಟಿ.ಕೆ., ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಮುರಗಯ್ಯಾ ವಿರಕ್ತಮಠ, ಅರವಿಂದ ಏಗನಗೌಡರ, ಸುಧೀರ ಎಸ್.ಬೋಳಾರ ಹಾಗೂ ರತ್ನಾ ತೇಗೂರಮಠ ಅವರು ಸಭೆಯಲ್ಲಿ ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು ಉಪಸ್ಥಿತರಿದ್ದರು.

# ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ ಆಯ್ಕೆಗೆ ನಾಮನಿರ್ದೇಶನ ಆಹ್ವಾನ

**ಬೆಳಗಾವಿ :** ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕಗೆ 2024 ನೇ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2024 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು ಅಥವಾ ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ನಾಮನಿರ್ದೇಶನ ಕೂಡ ಮಾಡಬಹುದಾಗಿದೆ.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರೈತರಿಂದ ಮನವಿ

**ಬ್ಯಾಡಗಿ :** ರೈತರಿಗೆ ಬರ ಪರಿಹಾರ ವಿತರಣೆ ಹಾಗೂ ಹಾವೇರಿ ಜಿಲ್ಲೆಯಲ್ಲಿ ಮೆಕ್ಕೆ ಜೋಳ ಖರೀದಿ ಕೇಂದ್ರ ಸ್ಥಾಪನೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿ–ಕೆಗೆ ಒತ್ತಾಯಿಸಿ ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ತಾಲೂಕಿನ ರೈತ ಸಂಘದ ಕಾರ್ಯಕರ್ತರು ಮನವಿ ಸಲ್ಲಿಸಿದರು.



ತಾಲೂಕಿನ ಗುಂಡೇನಹಳ್ಳಿ ಗ್ರಾಮದಲ್ಲಿ ಕೆರೆಗೆ ಬಾಗಿನ ಅರ್ಪಣೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿ ಮಾತನಾಡಿದ ಜಿಲ್ಲಾ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಬಳ್ಳಾರಿ ಅವರು, ಕಳೆದ ವರ್ಷ ಅನಾವೃಷ್ಟಿಯಿಂದ ತತ್ತರಿಸಿದ್ದ ಹಾವೇರಿ ಜಿಲ್ಲೆಯನ್ನು ಬರಗಾಲ ಪ್ರದೇಶವೆಂದು ಘೋಷಿಸಿದ್ದರೂ ಸಹ ಎಲ್ಲ ರೈತರಿಗೂ ಬರ ಪರಿಹಾರ ವಿತರಣೆಯಾಗಿಲ್ಲ. ಇದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿ ಕಂಗಾಲಾಗಿದ್ದಾರೆ. ಈ ಬಗ್ಗೆ ಸೂಕ್ತ ಕ್ರಮ ವಹಿಸಿ ಬರ ಪರಿಹಾರ ವಿತರಣೆ ಮಾಡಿಸಲು ಸರ್ಕಾರದ ಮೇಲೆ ಒತ್ತಡ ಹೇರಲು ಆಗ್ರಹಿಸಿದರು. ತಾಲೂಕಾ ಕಾರ್ಯಾಧ್ಯಕ್ಷ ಕಿರಣ ಗಡಿಗೋಳ ಮಾತನಾಡಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ರೈತ ಉತ್ಪಾದಕ ಕಂಪನಿಗಳು ಅನುದಾನದ ಕೊರತೆಯಿಂದ ಬಳಲುತ್ತಿವೆ. ಈಗಾಗಲೇ ತಾಲೂಕಿನಲ್ಲಿ ತೆರೆದಿರುವ ಉತ್ಪಾದಕ ಕಂಪನಿಯು ಸರ್ಕಾರದ ಅನುದಾನ ಬಿಡುಗಡೆ–ಯಾಗದೇ ಅಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ ಗೌರವಧನ ನೀಡಲು ಹಾಗೂ ಇತರೆ ಕಾರ್ಯ ಚಟುವಟಿಕೆಗಳನ್ನು ಬಹಳಷ್ಟು ತೊಂದರೆಯನ್ನು ಅನುಭವಿಸುವಂತಾಗಿದೆ. ಉತ್ಪಾದಕ ಕಂಪನಿಗಳಿಗೆ ಸಕಾಲಕ್ಕೆ ಅನುದಾನ, ಆಯಾ ಗ್ರಾಪಂ ವ್ಯಾಪ್ತಿಯಲ್ಲಿ ಉಚಿತ ನಿವೇಶನ ಅಥವಾ ಸರ್ಕಾರಿ ಕಟ್ಟಡ ಒದಗಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ವಿರುಪಾಕ್ಷಪ್ಪ ಬಳ್ಳಾರಿ, ತಾಲೂಕಾ ಬಿಜೆಪಿ ಅಧ್ಯಕ್ಷ ಶಿವಯೋಗಿ ಶಿರೂರ, ಸುರೇಶ ಯತ್ನಳ್ಳಿ, ರೈತ ಮುಖಂಡರಾದ ಗಂಗಣ್ಣ ಎಲಿ, ಮೌನೇಶ ಕಮ್ಮಾರ, ಜಾನ್ ಪುನೀತ್, ಚಿಕ್ಕಪ್ಪ ಛತ್ರದ ಮಲ್ಲೇಶಪ್ಪ ಡಂಬಳ, ಶಶಿಧರ ಯತ್ನಳ್ಳಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಆಹ್ವಾನ

**ವಿಜಯಪುರ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರು / ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಾಗೂ ಪರಿಸರ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಲು 2001ರಲ್ಲಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿತು. ಅದರಂತೆ 2001ರಿಂದ 2016ರ ವರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಅರ್ಹ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ.

2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅರ್ಹ ಪತ್ರಕರ್ತರಿಗೆ ಈ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಪರಿಸರ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ ಹಾಗೂ ಪತ್ರಿಕೋದ್ಯಮದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರುವ ಅರ್ಹ ಪತ್ರಕರ್ತರನ್ನು ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು ಅಥವಾ ವೈಯುಕ್ತಿಕವಾಗಿ ಸ್ವಯಂ ಅರ್ಜಿ ಸಲ್ಲಿಸಬಹುದು.

2017 ರಿಂದ 2023 ರ ಅವಧಿಯ ಎರಡೂ ವಿಭಾಗಗಳ ಪ್ರಶಸ್ತಿಗಳಿಗೆ ತಲಾ 7 ಅರ್ಹ ಪತ್ರಕರ್ತರನ್ನು ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯ ಮೊತ್ತ ಒಂದು ಲಕ್ಷ ರೂ. ನಗದು ಪುರಸ್ಕಾರ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಯನ್ನು ಹೊಂದಿರುತ್ತದೆ.

ಅರ್ಜಿಗಳು / ನಾಮನಿರ್ದೇಶನಗಳನ್ನು ಮಾನ್ಯ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು 560001 ಇಲ್ಲಿಗೆ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ ಇ–ಮೇಲ್ ವಿಳಾಸ tsraward@gmail.com ಗೆ ದಿನಾಂಕ:30–09–2024ರ ಸಂಜೆ 5.00 ಗಂಟೆಯ ಒಳಗಾಗಿ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಅಹ್ವಾನ: ಅವಧಿ ವಿಸ್ತರಣೆ

**ಬೆಳಗಾವಿ :** ಪ್ರಸಕ್ತ ಸಾಲಿನ ಕೇಂದ್ರ ಸರ್ಕಾರದ ರಾಷ್ಟ್ರೀಯ ವಿದ್ಯಾರ್ಥಿವೇತನ ಯೋಜನೆಯಡಿ ಪ್ರೀ ಮೆಟ್ರಿಕ್ (9ನೇ & 10ನೇ ತರಗತಿ ಮಾತ್ರ) ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಎನ್‌ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನ ಆಹ್ವಾನಿಸಲಾಗಿತು ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅನುಕೂಲವಾಗುವ ನಿಟ್ಟಿನಲ್ಲಿ face authentication ಬದಲಾಗಿ Biometric Authentication ಮೂಲಕ ಅರ್ಜಿ ಸಲ್ಲಿಸಲು ಸೆ.30 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಅಭ್ಯರ್ಥಿಗಳು ಸಿಎಸ್‌ಸಿ ಕೇಂದ್ರ ಹಾಗೂ ಬಾಪೂಜಿ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ:8050609098 ಸಂಖ್ಯೆಗೆ ಅಥವಾ ಇಲಾಖೆಯ ವೆಬ್‌ಸೈಟ್ Website: www.disabilityaffairs.gov.in ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಚನ್ನಮ್ಮನ ಕಿತ್ತೂರು ಉತ್ಸವ–2024 ಪೂರ್ವಭಾವಿ ಸಭೆ**

# ಚನ್ನಮ್ಮನ ವಿಜಯೋತ್ಸವದ 200ನೇ ವರ್ಷದ ಅದ್ಧೂರಿ ಆಚರಣೆ ಸಿದ್ಧತೆಗೆ ಉಸ್ತುವಾರಿ ಸಚಿವರ ಸೂಚನೆ

**ಬೆಳಗಾವಿ :** ಚನ್ನಮ್ಮನ ವಿಜಯೋತ್ಸವದ 200 ವರ್ಷಗಳು ಪೂರ್ಣಗೊಂಡ ಹಿನ್ನಲೆಯಲ್ಲಿ ಪ್ರಸಕ್ತ ಸಾಲಿನ ಚನ್ನಮ್ಮ ಉತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲು ಸಿದ್ಧತೆಗಳನ್ನು ಮಾಡಿಕೊಳ್ಳಲು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಚನ್ನಮ್ಮ ಕಿತ್ತೂರು ಉತ್ಸವ–2024ರ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಪ್ರಸಕ್ತ ಸಾಲಿನ ಚನ್ನಮ್ಮನ ಕಿತ್ತೂರ ಉತ್ಸವ 200ನೆ ವರ್ಷದ ವಿಜಯೋತ್ಸವದ ಅಂಗಾವಾಗಿ ಅದ್ದೂರಿ ಕಾರ್ಯಕ್ರಮ ಆಯೋಜಿಸಬೇಕು. ಉತ್ಸವದ ಹಿನ್ನಲೆಯಲ್ಲಿ ಕಿತ್ತೂರ ಸ್ವಚ್ಛತೆಗೆ ಹೆಚ್ಚಿನ ಗಮನ ಹರಿಸಬೇಕು. ಉತ್ಸವದ ಅಂಗವಾಗಿ ಆಯೋಜಿಸಲಾಗುವ ಕ್ರೀಡಾಕೂಟಗಳಲ್ಲಿ ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಒತ್ತು ನೀಡಬೇಕು. ಸ್ಪರ್ಧೆಗಳಲ್ಲಿ ವಿಜೇತರಿಗೆ ಪ್ರಮಾಣ ಪತ್ರ ಹಾಗೂ ನಗದು ಬಹುಮಾನ ನೀಡಬೇಕು. ಮೂರು ದಿನಗಳ ಕಾಲ ಜರುಗಲಿರುವ ಚನ್ನಮ್ಮನ ಕಿತ್ತೂರ ಉತ್ಸವದ ಕಾರ್ಯಕ್ರಮದ ಪ್ರಯುಕ್ತ ವಿಚಾರ ಗೋಷ್ಠಿಗಳ ಆಯೋಜನೆಗೆ ಕ್ರಮ ವಹಿಸಲು ಸೂಚಿಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಯಲ್ಲಿ ಸ್ಥಳೀಯ ಕಲಾವಿದರುಗಳಿಗೆ ಪ್ರಾಶಸ್ತ್ಯ ನೀಡಬೇಕು. ಕಲಾವಿದರ ಆಯ್ಕೆಗೆ ಸಮಿತಿ ರಚಿಸಿ ಸಮಿತಿಯಿಂದ ಆಯ್ಕೆಯಾದಂತಹ ಕಲಾವಿದರಿಗೆ ಮಾತ್ರ ಅವಕಾಶ ನೀಡಬೇಕು. ಕಾರ್ಯಕ್ರಮದ ಪ್ರಯುಕ್ತ ನಿರ್ಮಿಸಲಾಗುವ ವೇದಿಕೆಗಳಿಗೆ ಸ್ವಾತಂತ್ರ್ಯ ಹೋರಾಟಗಾರರ ಹೆಸರಿಡಲು ಸೂಚಿಸಿದ ಅವರು ಆಮಂತ್ರಣ ಪತ್ರಿಕೆಯಲ್ಲಿ ಹೋರಾಟದಲ್ಲಿ ಪಾಲ್ಗೊಂಡ ವಂಶಜರ ಹೆಸರುಗಳನ್ನು ನಮೂದಿಸಲು ತಿಳಿಸಿದರು. ಮಹಿಳಾ ಸಾಧಕಿಯರನ್ನು ಗುರುತಿಸಿ ಅವರಿಗೆ ಸನ್ಮಾನಿಸಬೇಕು. ಉತ್ಸವದ ದಿನಗಳಂದು ಆಗಮಿಸುವ ಸಾರ್ವಜನಿಕರಿಗೆ ಅಚ್ಚುಕಟ್ಟಾದ ಊಟ ಹಾಗೂ ಉಪಹಾರದ ವ್ಯವಸ್ಥೆ ಮಾಡಬೇಕು. ಚನ್ನಮ್ಮನ ವಿಜಯೋತ್ಸವದ 200 ವರ್ಷಗಳು ಪೂರ್ಣಗೊಂಡ ಹಿನ್ನಲೆಯಲ್ಲಿ ಸ್ಮರಣ ಸಂಚಿಕೆ ಬಿಡುಗಡೆಗೆ ಸಮಿತಿಯನ್ನು ರಚಿಸಬೇಕು. ವೇದಿಕೆ ಸಿದ್ಧತೆ, ವಾಹನ ನಿಲುಗಡೆ ವ್ಯವಸ್ಥೆ ಸೇರಿದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು.

ಜನಪದ ವಿಶ್ವವಿದ್ಯಾಲಯದಿಂದ ಲಾಂಛನ ತಯಾರಿಸಲು ತಿಳಿಸಿದ ಸಚಿವರು ರಾಣಿ ಚನ್ನಮ್ಮನ ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಶಿಕ್ಷಣ ಇಲಾಖೆ ವತಿಯಿಂದ ರಾಜ್ಯದಲ್ಲಿ ಪ್ರಬಂಧ ಹಾಗೂ ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಲು ತಿಳಿಸಿದರು.

ಎಲ್ಲ ಇಲಾಖೆ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವದರ ಮೂಲಕ ಒಟ್ಟಾರೆಯಾಗಿ ಈ ಬಾರಿಯ ಚನ್ನಮ್ಮನ 200ನೇ ವರ್ಷದ ವಿಜಯೋತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲು ಸಚಿವರಾದ ಸತೀಶ ಜಾರಕಿಹೊಳಿ ಅವರು ಸೂಚಿಸಿದರು.

ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಮಾತನಾಡಿ ಕಿತ್ತೂರ ಉತ್ಸವದ ಅಂಗವಾಗಿ ಈ ಬಾರಿ ಏರ್ ಶೋ ನಡೆಸಲು ಚಿಂತಿಸಾಗುತ್ತಿದೆ. 200 ವರ್ಷಗಳ ನೆನಪಿಗಾಗಿ ಅಂಚೆ ಚೀಟಿ ಹಾಗೂ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಬಾರಿಯ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುತ್ತಿರುವ ಹಿನ್ನಲೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರನ್ನು ಸ್ವಾಗತಿಸಲು ಪ್ರತ್ಯೇಕ ಶಿಷ್ಟಾಚಾರ ಸಮಿತಿಯನ್ನು ರಚಿಸಲಾಗುವದು. ಸ್ಮರಣ ಸಂಚಿಕೆ ಸಮಿತಿ ರಚಿಸಲು ಯೋಜಿಸಲಾಗಿದೆ. ಕಿತ್ತೂರ ಹಾಗೂ ಸ್ವಾತಂತ್ರ್ಯ ಯೋಧರ ಕುರಿತು ಪ್ರಬಂಧ ಹಾಗೂ ರಸಪ್ರಶ್ನೆ ಸ್ಪರ್ಧೆಗಳನ್ನು ರಾಜ್ಯ ಮಟ್ಟದಲ್ಲಿ ಆಯೋಜಿಸುವದರ ಜೊತೆಗೆ ವಾಯುವ್ಯ ಕರ್ನಾಟಕ ಸಾರಿಗೆ ಬದಲಾಗಿ ಕಿತ್ತೂರ ಕರ್ನಾಟಕ ಸಾರಿಗೆ ಎಂದು ನಾಮಕರಣ ಮಾಡಲು ಸಹ ಚಿಂತಿಸಲಾಗುತ್ತಿದೆ ಎಂದು ತಿಳಿಸಿದರು.

ಕಿತ್ತೂರು ವಿಧಾನಸಭಾ ಕ್ಷೇತ್ರದ ಶಾಸಕ ಬಾಬಾಸಾಹೇಬ್ ಪಾಟೀಲ, ಬೆಳಗಾವಿ ಉತ್ತರ ವಿಧಾನಸಭಾ ಶಾಸಕ ಆಸೀಫ್ (ರಾಜು) ಸೇಠ, ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮರ್ಬನ್ಯಾಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಐಎಎಸ್ ಪ್ರೊಬೇಷನರಿ ಅಧಿಕಾರಿ ದಿನೇಶಕುಮಾರ ಮೀನಾ, ಬೆಳಗಾವಿ, ಕಿತ್ತೂರು ಉಪವಿಭಾಗಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಮನುಷ್ಯನ ಸ್ವಭಾವವನ್ನು ಒಂದೇ ಸಲ ತಿದ್ದಲು ಸಾಧ್ಯವಿಲ್ಲ

**ಮೂಡಲಗಿ :** ಮನುಷ್ಯನ ಸ್ವಭಾವವನ್ನು ಒಂದೇ ಸಲ ತಿದ್ದಲು ಸಾಧ್ಯವಿಲ್ಲ. ಪ್ರತಿನಿತ್ಯ ಪ್ರವಚನ, ಆಧ್ಯಾತ್ಮಿಕ ಚಟುವಟಿಕಗಳಿಗೆ ನಮ್ಮನ್ನು ನಾವೇ ತೊಡಗಿಸಿಕೊಳ್ಳುವುದರ ಮುಖಾಂತರ ಪೂಜ್ಯರು ಹೇಳಿದ ಮಾತನ್ನು ನಮ್ಮ ವೈಯಕ್ತಿಕ ಬದುಕಿಗೆ ಅಳವಡಿಸಿಕೊಳ್ಳುವ ಮೂಲಕ ಒಂದು ಸ್ವಲ್ಪ ಬದಲಾವಣೆಯಾಗಲಿಕ್ಕೆ ಸಾಧ್ಯವಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಗುರುವಾರ ತಾಲೂಕಿನ ಶಿವಾಪುರ (ಹ) ಗ್ರಾಮದ ಶ್ರೀ ಅಡವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ಆಯೋಜಿಸಿದ ಬಸವ ದರ್ಶನ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಂಸದ ಈರಣ್ಣ ಕಡಾಡಿ ಅವರು ಆಧ್ಯಾತ್ಮದ ಅಂತರಾಳ ಮೌಲ್ಯವನ್ನು ಉಳಿಸುವವ ಗುರು. ಗುರುವಿನ ಆರಾಧನೆ ಶ್ರೇಷ್ಠವಾದುದು ಅವರ ಮಾರ್ಗದರ್ಶನ ಅವಶ್ಯವಿದೆ ಎಂದರು.

ಸಮಾಜದ ಎಲ್ಲ ಜನರು ಒಂದುಗೂಡಿ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡಬೇಕು ಇಂತಹ ಕಾರ್ಯಕ್ರಮಗಳಲ್ಲಿ ಎಲ್ಲರೂ ಒಂದುಗೂಡುವ ಅವಕಾಶ ಸಿಗುತ್ತದೆ ಎಂದರಲ್ಲದೇ ಅಡವಿಸಿದ್ದೇಶ್ವರ ಅಜ್ಜನ ಜಾತ್ರೆಯಲ್ಲಿ ಮಹಿಳೆಯರು ಟಿವಿ ಬಿಟ್ಟು ಪ್ರವಚನ ಕೇಳಲು ಬಂದಿರುವುದು ಖುಷಿ ಸಂಗತಿ ಎಂದರು.




ಕೃಷಿ ತಂತ್ರಜ್ಞಾನದಲ್ಲಿ ಸಾಧನೆ ಮಾಡಿದ ಪ್ರಗತಿಪರ ರೈತರನ್ನು ಕಂಡು ಕೃಷಿಯಲ್ಲಿ ಸಾಧನೆ ಮಾಡಬೇಕು. ಇದರಿಂದ ಪ್ರತಿಯೊಬ್ಬರು ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವ ನೀಡುತ್ತಿದ್ದಾರೆ. ಎಲ್ಲರೂ ಸರ್ಕಾರದ ಯೋಜನೆಗಳ ಸವಲತ್ತುಗಳನ್ನು ಪಡೆಯಬೇಕೆಂದರು.

ಅಡವಿಸಿದ್ದೇಶ್ವರ ಮಠ ಪೂಜ್ಯರಾದ ಅಡವಿಸಿದ್ದರಾಮ ಮಹಾಸ್ವಾಮೀಜಿಗಳು ಸಾನಿಧ್ಯ ವಹಿಸಿದ್ದರು. ಪೂಜ್ಯ ಚಂದ್ರಶೇಖರ್ ಸ್ವಾಮೀಜಿಗಳು, ಅಭಿನವ ಚೆನ್ನಬಸವ ಮಹಾಸ್ವಾಮೀಜಿಗಳು, ಪಂಡಿತ್ ಪಂಚಾಕ್ಷರಿ ಶಾಸ್ತ್ರಿಗಳು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಕೆಂಪಣ್ಣ ಮುಧೋಳ, ಶಂಕರಗೌಡ ಪಾಟೀಲ, ಮಲ್ಲಪ್ಪ ಜುಂಜರವಾಡ, ಶಿವಬಸು ಜುಂಜರವಾಡ, ಸತೀಶ ಜುಂಜರವಾಡ, ಮಹಾಂತೇಶ ಕುಡಚಿ, ಉಮೇಶ ಮುಧೋಳ, ನಾಗಪ್ಪ ಚಿನಪ್ಪಗೋಳ, ಬಸಪ್ಪ ಶೀಳನ್ನವರ, ಪರಪ್ಪ ಗಿರೆಣ್ಣವರ, ಎನ್. ಜಿ ಹೆಬ್ಬಾಳ ಸೇರಿದಂತೆ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

# ಮಹಾಲಿಂಗಪುರ ಪಟ್ಟಣದಲ್ಲಿ ಮತ್ತೊಂದು ಗರ್ಭಪಾತ ಪ್ರಕರಣ ಬೆಳಕಿಗೆ

## ಪಾಟೀಲ ಆಸ್ಪತ್ರೆ ಹಾಗೂ ಧನ್ವಂತರಿ ಸ್ಕ್ಯಾನಿಂಗ್ ಸೆಂಟರ್ ಸೀಜ್ ಮಾಡಿದ ಅಧಿಕಾರಿಗಳು

### ಹೆಣ್ಣು ಎಂದು ಗರ್ಭಪಾತ: ನಂತರ ಗೊತ್ತಾಗಿದ್ದು ಗಂಡು ಮಗು ಎಂದು । ಗರ್ಭಪಾತ ವೇಳೆ ಗಂಡು ಮಗು ಎಂದು ಗೊತ್ತಾದ ಹಿನ್ನೆಲೆ ಹೊರಬಂದ ಪ್ರಕರಣ










**ಕಳೆದ 5–6 ದಿನಗಳಿಂದ ಸ್ಟ್ರಿಂಗ್ ಆಪರೇಶನ ಮಾಡಿದ್ದರಿಂದ ಮಹಾಲಿಂಗಪುರದ ಪಾಟೀಲ್ ಆಸ್ಪತ್ರೆಯಲ್ಲಿ ಗರ್ಭಪಾತ ಆಗಿರುವ ಪ್ರಕರಣ ಬೆಳಕಿಗೆ ಬಂದಿದೆ. ಗುರುವಾರ ರಾತ್ರಿ ಪಾಟೀಲ್ ಆಸ್ಪತ್ರೆಯನ್ನು ಸೀಜ್ ಮಾಡಿ, ಪ್ರಕರಣ ದಾಖಲಿಸಿಕೊಂಡು ಸರ್ಕಾರ ಮತ್ತು ಇಲಾಖೆಯ ಮೇಲಾಧಿಕಾರಿಗಳಿಗೆ ಮಾಹಿತಿ ಕಳಿಸಿಲಾಗಿದೆ. ಪಾಟೀಲ್ ಆಸ್ಪತ್ರೆಯಯಲ್ಲಿ ಗರ್ಭಪಾತವಾದ ಮಹಿಳೆಯು ಆ.30ರಂದು ಧನ್ವಂತರಿ ಸ್ಕ್ಯಾನಿಂಗ್ ಸೆಂಟರ್‌ನಲ್ಲಿ ಸ್ಕ್ಯಾನಿಂಗ್ ಮಾಡಿಸಿದ್ದಾರೆ. ಅದಕ್ಕಾಗಿ ಇಲ್ಲಿ ವಿಚಾರಣೆ ನಡೆಸಿ, ಪ್ರಾಥಮಿಕ ತನಿಖೆಯಲ್ಲಿ ಸ್ಕ್ಯಾನಿಂಗ್ ಸೆಂಟರ್‌ನಲ್ಲಿನ ಲೋಪದೋಷಗಳ ಹಿನ್ನಲೆ ಸ್ಕ್ಯಾನಿಂಗ್ ಸೆಂಟರ್ ಸೀಜ್ ಮಾಡಿ, ಪ್ರಕರಣ ದಾಖಲಿಸಿಕೊಂಡಿದ್ದೇವೆ. ನ್ಯಾಯಾಲಯದ ವಿಚಾರಣೆಯಲ್ಲಿ ಸತ್ಯಾಸತ್ಯತೆ ತಿಳಿಯುತ್ತದೆ. ಪಟ್ಟಣದಲ್ಲಿ ಇಂತಹ ಘಟನೆಗಳು ಮರುಕಳಿಸಬಾರದು. ಸಾರ್ವಜನಿಕರು ಗಂಡು ಹೆಚ್ಚು, ಹೆಣ್ಣು ಕಡಿಮೆ ಎಂಬ ಭೇದಭಾವ ಬಿಟ್ಟಾಗ ಮಾತ್ರ ಇಂತಹ ಘಟನೆಗಳಿಗೆ ಕಡಿವಾನ ಹಾಕಲು ಸಾಧ್ಯ. ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕಾಗಿದ್ದು ಅಗತ್ಯವಾಗಿದೆ.**

**– ಡಾ. ಸುವರ್ಣ ಕುಲಕರ್ಣಿ.**
**ಡಿಎಚ್‌ಓ , ಬಾಗಲಕೋಟೆ.**

**ಮಹಾಲಿಂಗಪುರ :** ಕಳೆದ ಮೇ 29ರಂದು ಮಹಾಲಿಂಗಪುರದ ಕವಿತಾ ಬಾಡನವರ ಅವರು ಅಕ್ರಮವಾಗಿ ಅವರ ಮನೆಯಲ್ಲಿಯೇ ಮಾಡಿದ ಗರ್ಭಪಾತದಿಂದ ಮಹಾರಾಷ್ಟ್ರ ಮಹಿಳೆ ಸಾವಾಗಿತ್ತು. ಈ ಘಟನೆಯು ಮರೆಯುವ ಮುನ್ನವೇ ಪಟ್ಟಣದಲ್ಲಿ ಮತ್ತೊಂದು ಗರ್ಭಪಾತ ಪ್ರಕರಣ ನಡೆದಿದೆ. ಗರ್ಭಪಾತ ಪ್ರಕರಣದ ಆರೋಪಿ ಕವಿತಾ ಬಾಡನವರ ಕಳೆದ ಮೂರು ತಿಂಗಳಿನಿಂದ ಜಾಮೀನು ಸಿಗದೇ ಜೈಲಿನಲ್ಲಿದ್ದಾರೆ.

ಹೀಗಿರುವಾಗಲೇ ಮಹಾಲಿಂಗಪುರ ಪಟ್ಟಣದಲ್ಲಿ ಮತ್ತೊಂದು ಗರ್ಭಪಾತ ಪ್ರಕರಣ ಬೆಳಕಿಗೆ ಬಂದು ಮೊದಲಿನಿಂದ ರುಚಿಕಟ್ಟಾದ ಬೆಲ್ಲಕ್ಕೆ ಹೆಸರುವಾಸಿಯಾದ ಮಹಾಲಿಂಗಪುರ ಈಗ ಅಕ್ರಮ ಗರ್ಭಪಾತ ವಿಷಯದಲ್ಲಿ ರಾಜ್ಯದ ಗಮನ ಸೆಳೆಯುತ್ತಿರುವದು ವಿಷಾದನೀಯ.

**ಪಾಟೀಲ್ ಆಸ್ಪತ್ರೆ ಸೀಜ್ :** ಪಟ್ಟಣದ ಡಬಲ ರಸ್ತೆಯಲ್ಲಿರುವ ಡಾ.ರಾಜೇಂದ್ರ ಪಾಟೀಲ ಅವರ ಆಸ್ಪತ್ರೆಯ ಮೇಲೆ ಖಚಿತ ಮಾಹಿತಿಯೊಂದಿಗೆ ಗುರುವಾರ ರಾತ್ರಿ ಬಾಗಲಕೋಟೆ ಡಿಎಚ್‌ಓ ಸುವರ್ಣ ಕುಲಕರ್ಣಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ದಯಾನಂದ ಕರೆನ್ನವರ, ಮುಧೋಳ ಟಿಎಚ್‌ಓ ವೆಂಕಟೇಶ ಮಲಘಾಣ ಅವರು ದಾಳಿ ಮಾಡಿದಾಗ ನೆರೆಯ ಮುಧೋಳ ತಾಲೂಕಿನ ರನ್ನಬೆಳಗಲಿ ಗ್ರಾಮದ ಸರಸ್ವತಿ ಹಳ್ಳೂರ (24) ಮಹಿಳೆಯ ಗರ್ಭಪಾತವನ್ನು ಮಾಡಿರುವದು ಖಚಿತವಾದ್ದರಿಂದ ಅಧಿಕಾರಿಗಳು ಪಾಟೀಲ್ ಆಸ್ಪತ್ರೆಯ ಮುಖ್ಯವೈದ್ಯರ ಓಪಿಡಿ, ನೆಲಮಹಡಿಯ ಎರಡನೇ ಓಪಿಡಿ, ಡೆಲಿವರಿ ಥಿಯೇಟರ್, ಸ್ಕ್ಯಾನಿಂಗ್ ಸೆಂಟರ್, ಎಮ್‌ಆರ್‌ಡಿ ರೂಮ್ ಸೀಜ್ ಮಾಡಿದ್ದಾರೆ.

**14 ವಾರಗಳ ಭ್ರೂಣದ ಗರ್ಭಪಾತ :** 14 ವಾರಗಳ ಭ್ರೂಣವನ್ನು ಡಾ.ಪಾಟೀಲ್ ಅವರು ಗರ್ಭಪಾತ ಮಾಡಿದ್ದಾರೆ. ವಿಚಿತ್ರವೆಂದರೆ ಆ ಮಹಿಳೆಗೆ ಈ ಮೊದಲು ಮೂರು ಹೆಣ್ಣುಮಕ್ಕಳಿದ್ದಾರೆ. ಇದು ನಾಲ್ಕನೇ ಮಗು, ಹೆಣ್ಣು ಮಗು ಎಂದು ಗರ್ಭಪಾತ ಮಾಡಿಸಿದ್ದಾರೆ. ಗರ್ಭಪಾತದ ನಂತರ ಗಂಡು ಎಂದು ಗೊತ್ತಾಗಿದ್ದರಿಂದ ಸದರಿ ಪ್ರಕರಣವು ಬೆಳಕಿಗೆ ಬಂದಿದೆ. ಗರ್ಭಪಾತ ಮಾಡಿಸಿಕೊಂಡ ಮಹಿಳೆಯ ಪತಿ ನೀಡಿದ ಹೇಳಿಕೆಯಾದರಿಸಿ, ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

**ದಾಳಿಯ ವೇಳೆ ಗರ್ಭಪಾತ ಮಾಡಿದ ದಾಖಲೆಗಳು ಪತ್ತೆ :** ಮೂರು ತಿಂಗಳ ಹಿಂದೆ ಮಹಾಲಿಂಗಪುರ ಪಟ್ಟಣದಲ್ಲಿ ಆದ ಕವಿತಾ ಬಾಡನವರ ಪ್ರಕರಣದಲ್ಲಿ ಇತ್ತಿಚಿಎ ಮೊದಲಿನ ಡಿಎಚ್‌ಓ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಸೇರಿದಂತೆ ನಾಲ್ವರ ತಲೆದಂಡವಾಗಿದ್ದರಿಂದ ಅವರ ಜಾಗಕ್ಕೆ ಬಂದಿರುವ ನೂತನ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದಾರೆ. ಡಾ.ರಾಜೇಂದ್ರ ಪಾಟಿಲ್ ಆಸ್ಪತ್ರೆಯ ದಾಳಿಯ ವೇಳೆ ಗರ್ಭಪಾತ ಮಾಡಿದ ಅಗತ್ಯ ದಾಖಲೆಗಳು ದೊರೆತ ಹಿನ್ನಲೆ ಅಧಿಕಾರಿಗಳು ಆಸ್ಪತ್ರೆಯ ಎರಡು ಓಪಿಡಿ, ಸ್ಕ್ಯಾನಿಂಗ್ ಸೆಂಟರ್, ಡೆಲಿವರಿ ಥೇಟರ್ ಸೇರಿದಂತೆ 4 ಕೊಠಡಿಗಳನ್ನು ಸೀಜ್ ಮಾಡಿ ವೈದ್ಯರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಧನ್ವಂತರಿ ಸ್ಕ್ಯಾನಿಂಗ್ ಸೆಂಟರ್ ಸೀಜ್ :** ಶುಕ್ರವಾರ ಸಂಜೆ ಮತ್ತೆ ಮಹಾಲಿಂಗಪುರಕ್ಕೆ ಬಂದ ಬಾಗಲಕೋಟೆ ಡಿಎಚ್‌ಓ ಸುವರ್ಣ ಕುಲಕರ್ಣಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ದಯಾನಂದ ಕರೆನ್ನವರ ಅವರು ಪಾಟೀಲ ಆಸ್ಪತ್ರೆಯಲ್ಲಿ ಗರ್ಭಪಾತ ಮಾಡಿಸಿಕೊಂಡ ಮಹಿಳೆಯು ಆ.30ರಂದು ಧನ್ವಂತರಿ ಸ್ಕ್ಯಾನಿಂಗ್ ಸೆಂಟರ್‌ನಲ್ಲಿ ಗರ್ಭಪತ್ತೆ ಮಾಡಿಕೊಂಡಿರುವದರಿಂದ ಅಧಿಕಾರಿಗಳು ಶುಕ್ರವಾರ ಸಂಜೆ 5ರಿಂದ ರಾತ್ರಿ 8 ಗಂಟೆವರೆಗೂ ಸ್ಕ್ಯಾನಿಂಗ್ ಸೆಂಟರ್‌ನ ವೈದ್ಯರ ವಿಚಾರಣೆ ನಡೆಸಿ, ಪ್ರಾಥಮಿಕ ತನಿಖೆಯಲ್ಲಿ ಲೋಪದೋಷಗಳು ಕಂಡು ಬಂದ ಕಾರಣ, ಧನ್ವಂತರಿ ಸ್ಕ್ಯಾನಿಂಗ್ ಸೆಂಟರ್‌ನ್ನು ಸೀಜ್ ಮಾಡಿದ್ದಾರೆ.

ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ದಯಾನಂದ ಕರೆನ್ನವರ, ಸ್ಥಳಿಯ ಸಮುದಾಯ ಆರೋಗ್ಯ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಸಿ.ಎಂ.ವಜ್ಜರಮಟ್ಟಿ ಹಾಗೂ ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿ ಇದ್ದರು.

# ಬೀದಿ ಬದಿ ವ್ಯಾಪಾರಿಗಳ ಕಷ್ಟಕ್ಕೆ ಸ್ಪಂದನೆ: ಮೈಬೂಬ ಕುಳಗೇರಿ

**ಮುದ್ದೇಬಿಹಾಳ :** ನಗರ, ಪಟ್ಟಣ ಸೇರಿದಂತೆ ಬೀದಿ ಬದಿಗಳಲ್ಲಿ ಸಣ್ಣ ಪುಟ್ಟ ವ್ಯಾಪಾರದೊಂದಿಗೆ ಬದುಕು ಕಟ್ಟಿಕೊಂಡ ಕುಟುಂಬಗಳಿಗೆ ಸರಕಾರದಿಂದ ಸಾಲ ಹಾಗೂ ವಿವಿಧ ಸೌಲಭ್ಯಗಳನ್ನು ಒದಗಿಸಲು ಶಾಸಕ ಸಿ.ಎಸ್.ನಾಡಗೌಡ ಅವರ ಮಾರ್ಗದರ್ಶನದಲ್ಲಿ ಪ್ರಾಮಾಣೀಕ ಪ್ರಯತ್ನ ಮಾಡುತ್ತೇನೆ ಎಂದು ಕೆಪಿಸಿಸಿ ಬೀದಿ ಬದಿಯ ವ್ಯಾಪಾರಸ್ಥರ ತಾಲೂಕಾ ಅಧ್ಯಕ್ಷರಾದ ಮೈಬೂಬ ಕುಳಗೇರಿ ಹೇಳಿದರು.

ತಾಲೂಕಿನ ನಾಲತವಾಡ ಪಟ್ಟಣದ ಪ.ಪಂ ಕಾರ್ಯಾಲಯದಲ್ಲಿ ಸ್ಥಳಿಯ ಡಿಎಸ್‌ಎಸ್ ಯುವ ಮುಖಂಡರು ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಸನ್ಮಾನಿತರಾಗಿ ಅವರು ಮಾತನಾಡಿದರು.

ಕಳೆದ ಹಲವಾರು ವರ್ಷಗಳಿಂದಲೂ ಸೂಕ್ತ ಸ್ಥಳಗಳಿಲ್ಲದೇ ಸಿಕ್ಕಲ್ಲೇ ವ್ಯಾಪಾರ ಮಾಡುತ್ತೀರುವ ಹಲವಾರು ಕುಟುಂಬಗಳಿವೆ ಅವರಿಗೆ ತರಕಾರಿ, ಹಣ್ಣು ಹಂಪಲ, ಮಸಾಲೆ, ಬೇಕರಿ, ಹೂವು, ಬಟ್ಟೆ ವ್ಯಾಪಾರ ಸೇರಿದಂತೆ ಸರಕಾರದ ಸೌಲಭ್ಯ ಹಾಗೂ ಗುರುತಿನ ಚೀಟಿಗಳನ್ನು ಮತ್ತು ಸಾಲ ಸೌಲಭ್ಯಗಳನ್ನು ಒದಗಿಸುವ ನಿರಂತರ ಪ್ರಯತ್ನದಲ್ಲಿದ್ದೇನೆ ಎಂದರು.



ಈ ವೇಳೆ ಸನ್ಮಾನ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಡಿಎಸ್‌ಎಸ್ ಮುಖಂಡರಾದ ಸಿದ್ದು ಕಟ್ಟಿಮನಿ, ಮಂಜು ಕಟ್ಟಿಮನಿ ಹಾಗೂ ಪ.ಪಂ ಮಾಜಿ ಸದಸ್ಯರಾದ ಭೀಮಣ್ಣ ಗುರಿಕಾರ ಮಾತನಾಡಿದರು. ಸಭೆಯಲ್ಲಿ ದುರಗಪ್ಪ ಲೊಟಗೇರಿ, ಮಲ್ಲಪ್ಪ ಚಲವಾದಿ, ಕಾಶೀಮಸಾಬ ತೆಗ್ಗಿನಮನಿ ಸೇರಿದಂತೆ ಹಲವರಿದ್ದರು.

# ಸಮಾಜದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ: ಸಂಗಮೇಶ ಬಬಲೇಶ್ವರ

**ವಿಜಯಪುರ :** ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರ ಪಾತ್ರ ಸಮಾಜದಲ್ಲಿ ಮಹತ್ವದ್ದಾಗಿದ್ದು, ಶಿಕ್ಷಕರ ಕಾರ್ಯ ಅನನ್ಯವಾಗಿದೆ ಎಂದು ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಹಾಗೂ ನಗರ ವಲಯ ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರ ಸಹಯೋಗದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳ ಸವಾರ್ಂಗೀಣ ವ್ಯಕ್ತಿತ್ವದ ಬೆಳವಣಿಗೆಗೆ ಪೂರಕವಾಗಿ ಪಾಠ ಬೊಧನೆ ಮಾಡುವ ಮೂಲಕ ಮುಂದಿನ ಉತ್ತಮ ನಾಗರಿಕರನ್ನಾಗಿ ರೂಪಿಸುವ ಬಹು ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲಿದೆ. ಮಕ್ಕಳ ಅಂತರಾಳವನ್ನು ಅರಿತು, ಪರಿಣಾಮಕಾರಿಯಾಗಿ ಬೋಧನೆ ಮಾಡುವ ಮೂಲಕ ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಕಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಗುರು ಶಿಷ್ಯ ಪರಂಪರೆ ಪ್ರಾಚೀನ ಕಾಲದಿಂದಲೂ ಇದೆ.




ಗುರುವನ್ನು ದೇವರನ್ನಾಗಿ ಕಾಣುವ ದೇಶ ನಮ್ಮದು. ದೇಶದ ಭವಿಷ್ಯ ಎಂದು ಮಕ್ಕಳನ್ನು ಕರೆಯುತ್ತೇವೆ. ಅಂತಹ ಮಕ್ಕಳ ಭವ್ಯ ಭವಿಷ್ಯವನ್ನು ರೂಪಿಸಿ ಸುಭದ್ರ ದೇಶ ನಿರ್ಮಾಣಕ್ಕೆ ಶಿಕ್ಷಕರ ಕೊಡುಗೆ ಬಹುಮುಖ್ಯವಾಗಿದ್ದು, ಮಕ್ಕಳಿಗೆ ಶಿಕ್ಷಕರು ತತ್ವಜ್ಞಾನಿಯಾಗಿ ಮಾರ್ಗದರ್ಶಕರಾಗಿ ಅವರ ಸುಂದರ ಕನಸಿಗೆ ಪ್ರೇರಣಾದಾಯಕವಾಗಿ ಪ್ರೊ?ರೀತ್ಸಾಹಿಸಬೇಕು ಎಂದು ಹೇಳಿದರು. ಶಿಕ್ಷಣದಿಂದ ನಮಗೆ ಜ್ಞಾನ, ಆತ್ಮವಿಶ್ವಾಸ, ಕೌಶಲ, ತಿಳಿವಳಿಕೆ, ಅರಿವು ಮೂಡುತ್ತದೆ. ಶಿಕ್ಷಣ ಎಂಬುದು ಬದುಕಿಗೆ ಬಹುಮುಖ್ಯವಾಗಿದ್ದು, ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಆಸ್ಥೆ ವಹಿಸಿ, ನಿಯಮಿತವಾಗಿ ವೇಳಾಪಟ್ಟಿ ಹಮ್ಮಿಕೊಂಡು ಮಕ್ಕಳ ಸರ್ವೋತೋಮುಖ ವ್ಯಕ್ತಿತ್ವದ ಬೆಳವಣಿಗೆಗೆ ಜವಾಬ್ದಾರಿಯುತವಾಗಿ ಹಾಗೂ ಅತ್ಯಂತ ಕಾಳಜಿ ಪೂರ್ವಕವಾಗಿ ಇನ್ನೂ ಉತ್ತಮವಾಗಿ ಕಾರ್ಯ ನಿರ್ವಹಿಸಬೇಕು. ಮಕ್ಕಳಿಗೆ ನಿರಂತರ ಪರಿಹಾರ ಬೋಧನೆ ಮಾಡಬೇಕು. ಪಠ್ಯೇತರ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು.ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವಲ್ಲಿ ಕೈಜೋಡಿಸಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಮಾತನಾಡಿ, ಶಿಕ್ಷಕರು ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಿ ಶಿಕ್ಷಣ ಗುಣಮಟ್ಟ ಹೆಚ್ಚಿಸುವಲ್ಲಿ ವಿವಿಧ ಶೈಕ್ಷಣಿಕಾ ಕಾರ್ಯಚಟುವಟಿಕೆಗಳನ್ನು ನಿರಂತರವಾಗಿ ಹಮ್ಮಿಕೊಳ್ಳಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಎನ್. ಎಚ್. ನಾಗೂರ, ಪ್ರತಿ ವ್ಯಕ್ತಿಯೂ ಗೌರವದಿಂದ ಬದುಕು ನಡೆಸಲು ಗುರುಗಳ ಪಾತ್ರ ಅಪಾರವಾಗಿದೆ. ಆತ್ಮ ಸಂತೋಷದಿಂದ ಕಾರ್ಯ ನಿರ್ವಹಿಸಿ ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಕೊಡುಗೆ ನೀಡಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಯ ಮೂರು ವಿಭಾಗದಿಂದ 21 ಜನ ಶಿಕ್ಷಕರಿಗೆ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು.

60 ಜನ ನಿವೃತ್ತ ಶಿಕ್ಷಕರನ್ನು ಗೌರವಿಸಿ ಸನ್ಮಾನಿಸಲಾಯಿತು.

2024–25ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಯಕ್ರಮಗಳ ಭಿತ್ತಿಪತ್ರ ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ವಿಜಯಪುರ ಮಹಾನಗರಪಾಲಿಕೆ ಮಹಾಪೌರರಾದ ಮಹೇಜಬಿನ್ ಹೊರ್ತಿ, ವಿಜಯಪುರ ನಗರ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ, ಶಿಕ್ಷಕರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು ಸೇರಿದಂತೆ, ಭಾರತ ಸೇವಾದಳ ಹಾಗೂ ಸ್ಕೌಟ್ಸ್ ಗೈಡ್ಸ್ ಮಕ್ಕಳು, ಜಿಲ್ಲೆಯ ವಿವಿಧ ತಾಲೂಕಿನಿಂದ ಆಗಮಿಸಿದ ಶಿಕ್ಷಕರು, ಅಧಿಕಾರಿಗಳು ಉಪಸ್ಥಿತರಿದ್ದರು.

# ತೇರದಾಳ ಪುರಸಭೆ ಅಧ್ಯಕ್ಷ–ಉಪಾಧ್ಯಕ್ಷರಿಗೆ ಸನ್ಮಾನ

## ಮಹಿಳೆಯರಿಗೆ ಅವಕಾಶ ಸಿಕ್ಕಾಗ ಸದುಪಯೋಗಗೊಳ್ಳಬೇಕು–ವೀಣಾ




**ತೇರದಾಳ :** ಮಹಿಳೆಯರಿಗೆ ಸಾರ್ವಜನಿಕರ ಸೇವೆ ಮಾಡಲು ಅವಕಾಶ ಸಿಗುವುದೆ ಅಪರೂಪ. ಅವಕಾಶ ಸಿಕ್ಕಾಗ ಅದನ್ನು ಸದುಪಯೋಗ ಪಡಿಸಿಕೊಂಡು ಹೆಚ್ಚಿನ ಸೇವೆ ಸಲ್ಲಿಸುವ ಮೂಲಕ ಜನರ ಮನದಲ್ಲಿ ಉಳಿಯಬೇಕೆಂದು ಜಿಪಂ ಮಾಜಿ ಅಧ್ಯಕ್ಷೆ ವೀಣಾ ಕಾಶಪ್ಪನವರ ಇಲ್ಲಿನ ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ ಹಾಗೂ ಉಪಾಧ್ಯಕ್ಷೆ ನಸ್ರಿನ್‌ಬಾನು ನಗಾರ್ಜಿ ಅವರಿಗೆ ಸಲಹೆ ನೀಡಿದರು.

ಗುರುವಾರ ಪಟ್ಟಣಕ್ಕೆ ಬೇಟಿ ನೀಡಿದ ಅವರು ಅಧ್ಯಕ್ಷ–ಉಪಾಧ್ಯಕ್ಷರನ್ನು ಸನ್ಮಾನಿಸಿ ಮಾತನಾಡಿದ ಅವರು, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಲಭ್ಯಗಳಿಗೆ ಹಾಗೂ ಮಹಿಳೆಯರ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಎಂದು ಹೇಳಿದ ಅವರು, ಪುರಸಭೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಹಕಾರ ನೀಡಿದ ಬೇರೆ ಪಕ್ಷದ ಸದಸ್ಯರನ್ನು ವಿಶ್ವಾಸಕ್ಕೆ ತಗೆದುಕೊಂಡು ಕೆಲಸ ಮಾಡಿ. ಅಧಿಕಾರ ಮುಖ್ಯ ಅಲ್ಲ. ಅಧಿಕಾರವಧಿಯಲ್ಲಿ ಮಾಡಿದ ಸೇವೆ ಬಹಳ ಮುಖ್ಯ. ಆ ದಿಸೆಯಲ್ಲಿಯೇ ತಾವು ಜಿಲ್ಲಾ ಪಂಚಾಯತಿಯಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವುದಾಗಿ ತಿಳಿಸಿದ ವೀಣಾ ಕಾಶಪ್ಪನವರ, ಅಭಿವೃದ್ಧಿ ವಿಷಯದಲ್ಲಿ ಸರಕಾರ ಬಳಿ ನಿಯೋಗ ತೆರಳುವುದಾದರೆ ನಾನು ನಿಮ್ಮೊಂದಿಗೆ ಇದ್ದೇನೆ. ಜನ ಮೊತ್ತೊಮ್ಮೆ ನಿಮಗೆ ಅಧಿಕಾರ ನೀಡುವ ನಿಟ್ಟಿನಲ್ಲಿ ಕೆಲಸ ಮಾಡಿ ಎಂದು ಕಿವಿಮಾತು ಹೇಳಿದರು.

ಸದಸ್ಯ ಶೆಟ್ಟೆಪ್ಪ ಸುಣಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಥಾಯಿ ಸಮಿತಿ ಚೇರಮನ್ ಕುಮಾರ ಸರಿಕರ, ಸದಸ್ಯರಾದ ಸುರೇಶ ಕಬಾಡಗಿ, ಪಯಾಜ್ ಇನಾಂದಾರ, ಲಕ್ಷ್ಮಣ ನಾಯಕ, ಹಾಪೀಜ್ ಮೌಲಾಅಲಿ ಚಿತ್ರಬಾನುಕೋಟೆ, ಅಶೋಕ ಉಳ್ಳಾಗಡ್ಡಿ, ಗುರುರಾಜ ಕುಲಕರ್ಣಿ, ಪಿ.ಎಸ್. ಮಾಸ್ತಿ, ಶಿವಾನಂದ ಕಾಂಬಳೆ, ಗೌತಮ ರೋಡಕರ, ರಾಜೇಸಾಬ ನಗಾರ್ಜಿ, ಸಂಜು ಹಾಡಕರ ಹಾಗೂ ಮತ್ತಿತರಿದ್ದರು.

# ಕೊಲ್ಹಾರ: ಕಬಡ್ಡಿಯಲ್ಲಿ ತಾಲೂಕಾ ಮಟ್ಟಕ್ಕೆ ಆಯ್ಕೆ

**ಕೊಲ್ಹಾರ :** ತಾಲೂಕಿನ ತಳೇವಾಢ ಪಿ.ಎಂ.ಶ್ರೀ ಕೆ.ಬಿ. ಎಮ್.ಪಿ.ಎಸ್. ಶಾಲೆಯ ಮಕ್ಕಳು ಹಣಮಾಪೂರದಲ್ಲಿ ಜರುಗಿದ ಕೊಲ್ಹಾರ ವಲಯ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಭಾಗವಹಿಸಿ ಕಬಡ್ಡಿಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾ–ರೆ. ಬಾಲಕರ ಥ್ರೋಬಾಲ್ ನಲ್ಲಿ ದ್ವಿತೀಯ ,ಉದ್ದ ಜಿಗಿತದಲ್ಲಿ ಶ್ರವಣಕುಮಾರ ಬ್ಯಾಲ್ಯಾಳ ದ್ವಿತೀಯ ಸ್ಥಾನ ಪಡೆದು ತಾಲೂಕು



ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಗುಂಡು ಎಸೆತ ಹಾಗೂ ಚಕ್ರ ಎಸೆತದಲ್ಲಿ ಭೀಮನಗೌಡ ಜಕ್ಕನ್ನವರ ತೃತೀಯ ಸ್ಥಾನ ಪಡೆದುಕೊಂದ್ದಾನೆ.ಅದೇ ರೀತಿ ಗ್ರಾಮದ ವಿಶ್ವಭಾರತಿ ಶಾಲೆಯ ಬಾಲಕಿಯರು ಕಬಡ್ಡಿಯಲ್ಲಿ ಪ್ರಥಮ ಸ್ಥಾನ ಪಡೆದು ತಾಲೂಕ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಕೆ.ಜಿ.ಎಚ್.ಪಿ.ಎಸ್.ಶಾಲೆಯ ವಿದ್ಯಾರ್ಥಿನಿಯರು ಥ್ರೋಬಾಲ್ ನಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿ–ದ್ದಾರೆ .ಕೆ.ಜಿ.ಎಸ್.ಶಾಲೆಯ ವಿದ್ಯಾರ್ಥಿನಿ ಕುಮಾರಿ ಜ್ಯೋತಿ ಚೌವ್ಹಾಣ್ ಗುಂಡು ಎಸೆತದಲ್ಲಿ ಪ್ರಥಮ ಹಾಗೂ ಚಕ್ರ ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾಳೆ. ತಾಲೂಕ ಮಟ್ಟಕ್ಕೆ ಆಯ್ಕೆಯಾದ ಎಲ್ಲ ವಿದ್ಯಾರ್ಥಿಗಳಿಗೆ ತಳೇವಾಡ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಸರ್ವಸದಸ್ಯರು ಹಾಗೂ ಶಾಲೆಯ ಮುಖ್ಯಗುರುಗಳು ಮತ್ತು ಶಿಕ್ಷಕರು ವಿದ್ಯಾರ್ಥಿಗಳ ಪೋಷಕರು ಹಾಗೂ ಗ್ರಾಮದ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ದಿ ನಿಗಮದ ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ವಿಜಯಪುರ :** ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುವ ವಿವಿಧ ಯೋಜನೆಗಳಡಿ ಸಾಲ–ಸೌಲಭ್ಯ ಪಡೆಯಲು ಆಸಕ್ತ ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ: 15–09–2024ರವರೆಗೆ ವಿಸ್ತರಿಸಲಾಗಿದೆ.

ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಪಂಚವೃತ್ತಿ ಅಭಿವೃದ್ಧಿ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಅರಿವು ಶೈಕ್ಷಣಿಕ ನೇರ ಸಾಲ ಯೋಜನೆ(ಹೊಸದು), ಅರಿವು ಶೈಕ್ಷಣಿಕ ನೇರ ಸಾಲ ಯೋಜನೆ(ನವೀಕರಣ) ವಿದೇಶ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ,

ಸ್ವಾವಲಂಬಿ ಸಾರಥಿ ಯೋಜನೆ, ಸ್ವ–ಯಂ ಉದ್ಯೋಗ ನೇರಸಾಲ (ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯಡಿ ಸಾಲ–ಸೌಲಭ್ಯ ಪಡೆಯಲಿಚ್ಚಿಸುವವರು ಸೇವಾ ಸಿಂಧು ಪೋರ್ಟಲ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ. ಸ್ವಾತಂತ್ರ್ಯ ಮಹೋತ್ಸವದ ಅಮೃತ ಯೋಜನೆಯಡಿ https://www.kaushalkar.gov.in ಮೂಲಕ ಅರ್ಜಿ ಸಲ್ಲಿಸಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://www.kvcdc.karna-taka.gov.in ಅಥವಾ ದೂರವಾಣಿ ಸಂಖ್ಯೆ 080–22374848 / 7899899039 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State